ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 151

ಬೆಲೆ ರೂ : 2.00

ರಾಯಚೂರು

ಪುಟ: 4

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887797

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶನಿವಾರ: 23-05-2026

# ಮೂರು ವರ್ಷವಾದರೂ ಆರ್. ಅಶೋಕ್‌ಗೆ ಸರ್ಕಾರಿ ನಿವಾಸ ಸಿಕ್ಕಿಲ್ಲ

**ಬೆಂಗಳೂರು,ಮೇ 22–** ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 3 ವರ್ಷ ಪೂರ್ಣಗೊಳಿಸುತ್ತಿರುವ ಸಂದರ್ಭದಲ್ಲಿ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರಿಗೆ ಇನ್ನೂ ಸರ್ಕಾರಿ ನಿವಾಸವನ್ನು ಮಂಜೂರು ಮಾಡಿಲ್ಲ. ಹುದ್ದೆ ಅಲಂಕರಿಸಿದಾಗಿನಿಂದ ಈವರೆಗೆ ಹಲವು ಬಾರಿ ಪತ್ರ ಬರೆದು ಮನವಿ ಮಾಡಿಕೊಂಡಿ ದ್ದರೂ, ರಾಜ್ಯ ಸರ್ಕಾರವು ಸ್ಪಂದಿಸಿಲ್ಲ ಎಂದು ಅವರು ಆಡಳಿತ ಪಕ್ಷದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಶಿಷ್ಟಾಚಾರದ ಪ್ರಕಾರ ವಿಧಾನಸಭೆ ಹಾಗೂ ವಿಧಾನಪರಿಷತ್ ವಿಪಕ್ಷದ ನಾಯಕರಿಗೆ ಸರ್ಕಾರಿ ಬಂಗಲೆ ನೀಡಬೇಕು. ಈ ಹಿಂದೆ ಬಿಜೆಪಿ ಸರ್ಕಾರ ಆಡಳಿತದಲ್ಲಿದ್ದ ಸಂದರ್ಭದಲ್ಲಿ ಕುಮಾರ ಕೃಪ ರಸ್ತೆಯಲ್ಲಿರುವ ಸರ್ಕಾರಿ ಬಂಗಲೆ ನೀಡಲಾಗಿತ್ತು. ಇದು ಅದೃಷ್ಟದ ಬಂಗಲೆ ಎಂದೇ ನಂಬಲಾಗಿತ್ತು. ಇದೀಗ ಆ ಬಂಗಲೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಉಳಿದುಕೊಂಡಿದ್ದಾರೆ. ಆರ್.ಅಶೋಕ್ ಅವರು ಬೆಂಗಳೂರಿನ ರೇಸ್ ಕೋರ್ಸ್ ರಸ್ತೆಯಲ್ಲಿರುವ ರೇಸ್ ವ್ಯೂ ಕಾಟೇಜ್ ಅಥವಾ ಕುಮಾರ ಪಾರ್ಕ್‌ನಲ್ಲಿರುವ ನಿವಾಸಗಳನ್ನು ಮಂಜೂರು ಮಾಡುವಂತೆ ಮುಖ್ಯಮಂತ್ರಿ ಮತ್ತು ಮುಖ್ಯ ಕಾರ್ಯದರ್ಶಿಗೆ ಇದುವರೆಗೆ 5 ರಿಂದ 6 ಬಾರಿ ಅಧಿಕೃತ ಪತ್ರಗಳನ್ನು ಬರೆದಿದ್ದಾರೆ. ಹಲವು ಬಾರಿ ಪತ್ರ ಬರೆದು ಹಾಗೂ ಅಧಿಕಾರಿಗಳನ್ನು ಖುದ್ದಾಗಿ ಭೇಟಿಯಾದರೂ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಲಾಗಿದೆ. ಅಧಿಕೃತ ನಿವಾಸ ಇಲ್ಲದಿರುವುದರಿಂದ, ಅವರು ತಮ ಸ್ವಂತ ನಿವಾಸವಾದ ಜಯನಗರದಿಂದಲೇ ಅಧಿಕೃತ ಸಭೆಗಳನ್ನು ನಡೆಸುತ್ತಿದ್ದಾರೆ.

ಈ ಬಗ್ಗೆ ಸ್ವತಃ ಆರ್.ಅಶೋಕ್ ಅಧಿಕೃತವಾಗಿ ಹೇಳಿಕೊಂಡಿದ್ದಾರೆ. ನಾವು ಐದಾರು ಬಾರಿ ಈ ಸಂಬಂಧ ಪತ್ರವನ್ನು ಬರೆದಿದ್ದೇವೆ. ಹಾಗಿದ್ದರೂ ಸರ್ಕಾರ ಸ್ಪಂದನೆ ಮಾಡಿಲ್ಲ ಎಂದಿದ್ದಾರೆ. ಬಿಜೆಪಿ ವಿರೋಧಪಕ್ಷದ ನಾಯಕನ ಸ್ಥಾನಕ್ಕೆ ಆಯ್ಕೆ ಮಾಡಿದ್ದು ತಡವಾಗಿ. ವಿರೋಧಪಕ್ಷದ ನಾಯಕ ಸ್ಥಾನಕ್ಕೆ ಅಶೋಕ ಆಯ್ಕೆ ಆದ ಬಳಿಕ ಸರ್ಕಾರಿ ನಿವಾಸ ಕೋರಿ ನಾಲ್ಕು ಪತ್ರಗಳನ್ನು ಬರೆದರೂ ಸರ್ಕಾರದಿಂದ ಈವರೆಗೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಅಶೋಕ ಅವರ ವಿಶೇಷ ಅಧಿಕಾರಿ ಈ ಸಂಬಂಧ ಮುಖ್ಯ ಕಾರ್ಯದರ್ಶಿಯವರನ್ನು ಎರಡು– ಮೂರು ಬಾರಿ ಭೇಟಿ ಮಾಡಿದ್ದರು. ಬೇಗನೆ ಕೊಡುತ್ತೇವೆ ಎಂದು ಹೇಳಿದರೂ ಇಲ್ಲಿಯವರಿಗೂ ಕೊಟ್ಟಿಲ್ಲ ಎಂದು ಮೂಲಗಳು ತಿಳಿಸಿವೆ.
ನಂ1, ಕುಮಾರಕೃಪಾ ಪೂರ್ವ, ನಂ 1 ರೇಸ್‌ವ್ಯೂ ಕಾಟೇಜ್, ರೇಸ್ ಕೋರ್ಸ್ ರಸ್ತೆ, ನಂ 2, ರೇಸ್ ವ್ಯೂ ಕಾಟೇಜ್, ರೇಸ್ ಕೋರ್ಸ್ ರಸ್ತೆ ಈ ಮೂರರಲ್ಲಿ ಒಂದನ್ನು 2 ನೇಪುಟಕ್ಕೆ

## ಮಳೆಗೆ ಬೆಂಗಳೂರು ತತ್ತರ:ಧರೆಗುರುಳಿದ ಮರ:ರಸ್ತೆಗಳು ಜಲಮಯ



**ಬೆಂಗಳೂರು:ಮೇ. 22–** ಸಿಲಿಕಾನ್ ಸಿಟಿಯಲ್ಲಿ ನಿನ್ನೆ ರಾತ್ರಿ ಸುರಿದ ಭಾರೀ ಮಳೆ ಹಾಗೂ ಬಿರುಗಾಳಿಯಿಂದ ನಗರವೇ ಅಸ್ತವ್ಯಸ್ತಗೊಂಡಿದೆ. ಒಂದೇ ಗಂಟೆ ಸುರಿದ ಮಹಾಮಳೆಗೆ ರಸ್ತೆಗಳಲ್ಲಿ ನೀರು ತುಂಬಿ, ಹಲವೆಡೆ ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡ ಪರಿಸ್ಥಿತಿ ನಿರ್ಮಾಣವಾಯಿತು. ರಸ್ತೆಗಳು ನದಿಗಳಂತಾಗಿ, ಅಂಡರ್‌ಪಾಸ್‌ಗಳು ಜಲಾವೃತಗೊಂಡು ಜನಜೀವನ ತತ್ತರಿಸಿತು. ನಗರದ ವಿವಿಧ ಭಾಗಗಳಲ್ಲಿ 40ಕ್ಕೂ ಹೆಚ್ಚು ಬೃಹತ್ ಮರಗಳು ಧರೆಗೆ 2ನೇ ಪುಟಕ್ಕೆ

# ರಾಯಚೂರಿನಲ್ಲಿ 371(ಜೆ) ಹೋರಾಟಗಾರರ ಮಹತ್ವದ ಸಭೆ ಮೇ 24ಕ್ಕೆ



**ಬೀದರ/ರಾಯಚೂರು ಮೇ.22:**ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡುವ ಉದ್ದೇಶದಿಂದ ಜಾರಿಗೆ ಬಂದ ಕಲಂ 371(ಜೆ)ಗೆ 12 ವರ್ಷಗಳು ಕಳೆದರೂ ಸಹ ಈ ಭಾಗದ ಜನರ ಜೀವನಮಟ್ಟದಲ್ಲಿ ನಿರೀಕ್ಷಿತ ಮಟ್ಟದ ಸುಧಾರಣೆ ಕಂಡುಬಂದಿಲ್ಲ ಎಂದು ಹೈದ್ರಾಬಾದ ಕರ್ನಾಟಕ ಹೋರಾಟ ಸಮಿತಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಸಂಘಟನೆಯ ವಿಭಾಗೀಯ ಮಹಾ ಪ್ರಧಾನ ಕಾರ್ಯದರ್ಶಿ ಅನಿಲ್ ಕುಮಾರ್ ಬೆಲ್ದಾರ್, ಕಲ್ಯಾಣ ಕರ್ನಾಟಕ ಪ್ರದೇಶವು ಇನ್ನೂ ದಾರಿದ್ರ್ಯ, ನಿರುದ್ಯೋಗ ಹಾಗೂ ಹಿಂದುಳಿತನದಿಂದ ಬಳಲುತ್ತಿದೆ ಎಂದು ಆರೋಪಿಸಿದ್ದಾರೆ.

ಗೋವಿಂದರಾವ್ ವರದಿಯ ಪ್ರಕಾರ ಈ ಭಾಗದ ಜನರ ಜೀವನಮಟ್ಟ ಮತ್ತಷ್ಟು ಹದಗೆಟ್ಟಿದ್ದು, ಸರ್ಕಾರಿ ಶಾಲೆಗಳಲ್ಲಿ ಸುಮಾರು 30 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯಿಂದ ಆಸ್ಪತ್ರೆಗಳು ಬಿಕೋ ಎನ್ನುತ್ತಿವೆ. ಉದ್ಯೋಗಾವಕಾಶಗಳ ಕೊರತೆಯಿಂದ ವಿದ್ಯಾವಂತ ಯುವಕರು ನಿರುದ್ಯೋಗಿಗ ಳಾಗುತ್ತಿದ್ದು, ಗ್ರಾಮೀಣ ಭಾಗದ ಜನರು ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ತಿಳಿಸಿದ್ದಾರೆ.

ಕಳೆದ 12 ವರ್ಷಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಸುಮಾರು 20 ಸಾವಿರ ಕೋಟಿ ರೂಪಾಯಿ ಅನುದಾನ ಮಂಜೂರಾಗಿದ್ದರೂ, ಅದರಲ್ಲಿ ಶೇಕಡಾ 40 ಕ್ಕಿಂತ ಕಡಿಮೆ ಮೊತ್ತಕ್ಕೆ ಮಾತ್ರ ಕ್ರಿಯಾ ಯೋಜನೆ ರೂಪಿಸಲಾಗಿದೆ. 2025–26ನೇ ಸಾಲಿನಲ್ಲಿ ಮಂಜೂರಾದ 5000 ಕೋಟಿ ರೂಪಾಯಿ ಅನುದಾನದಲ್ಲೂ ಕೇವಲ ಅಂದಾಜು 800 ಕೋಟಿ ರೂಪಾಯಿಗೆ ಮಾತ್ರ ಯೋಜನೆ ಸಿದ್ಧಪಡಿಸಿರುವುದು ಅಧಿಕಾರಿಗಳ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಆರೋಪಿಸಲಾಗಿದೆ.

ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳ ಗುಣಮಟ್ಟ ಕಳಪೆಯಾಗಿದ್ದು, ಈ ಕುರಿತು ಬೆಳಗಾವಿ ಅಧಿವೇಶನದಲ್ಲಿಯೂ ಆರೋಪ–ಪ್ರತ್ಯಾರೋಪಗಳು ನಡೆದಿವೆ ಎಂದು ಪ್ರಕಟಣೆಯಲ್ಲಿ ಉಲ್ಲೇಖಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಹೈದ್ರಾಬಾದ ಕರ್ನಾಟಕ ಹೋರಾಟ ಸಮಿತಿ ಹಾಗೂ ಹೈದರಾಬಾದ್ ಕರ್ನಾಟಕ ಜನಾಂದೋಲನ ಕೇಂದ್ರ, ರಾಯಚೂರು ವತಿಯಿಂದ ಮೇ 24ರಂದು ರವಿವಾರ ಬೆಳಗ್ಗೆ 11 ಗಂಟೆಗೆ ರಾಯಚೂರಿನ ಖಾಸಗಿ ಕೊಠಾರಿ ಫಂಕ್ಷನ್ ಹಾಲ್‌ನಲ್ಲಿ ಕಲಂ 371(ಜೆ) ಹೋರಾಟಗಾರರು, ಜನಪರ ಸಂಘಟನೆಗಳು, ಚುನಾಯಿತ ಹಾಗೂ 2ನೇಪುಟಕ್ಕೆ

# ಮುಂದುವರೆದ ಅಬಕಾರಿ ಇಲಾಖೆಯಿಂದ ದಾಳಿ: 24 ಲೀಟರ್ ಸೇಂಧಿ ವಶಕ್ಕೆ

ಧೈರ್ಯದ ದಾರಿ



**ರಾಯಚೂರು ಮೇ.22:** ರಾಯಚೂರು ಅಬಕಾರಿ ಉಪ ವಿಭಾಗದ ಉಪ ಅಧೀಕ್ಷಕರರು ಹಾಗೂ ಅಬಕಾರಿ ರಾಯಚೂರು ವಲಯ ನೀರಿಕ್ಷಕರ ನೇತೃತ್ವದಲ್ಲಿ ಇತ್ತೀಚೆಗೆ ರಾಯಚೂರಿನ ರೈಲ್ವೇ ನಿಲ್ದಾಣದಲ್ಲಿ ಗಸ್ತು ಮಾಡುತ್ತಿರುವ ಸಮಯದಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಲೋಖಪ್ಪ ಎಂಬ ಆರೋಪಿಯನ್ನು ವಶಕ್ಕೆ ಪಡೆದು ಗುನ್ನ ಸಂಖ್ಯೆ: 76/2025–26ರಡಿ ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಕೊಳ್ಳಲಾಗಿದೆ.
ದಾಳಿಯ ವೇಳೆಯಲ್ಲಿ ಸುಮಾರು 24 ಲೀಟರ್ ಸೇಂಧಿ ಪತ್ತೆಯಾಗಿದ್ದು, ಸೇಂಧಿಯನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿಯು ರಾಯಚೂರು ತಾಲೂಕಿನ ಮಮದಾಪುರ ಗ್ರಾಮದ ನಿವಾಸಿಯಾಗಿದ್ದು, ಆರೋಪಿಯ ಮೇಲೆ ಸ್ಥಳದಲ್ಲಿಯೇ ಪಂಚನಾಮೆ ಅಡಿಯಲ್ಲಿ ರಾಯಚೂರಿನ ಅಬಕಾರಿ ಉಪ ನಿರೀಕ್ಷಕರು–1ವಲಯ ರಾಯಚೂರು ಅವರು ಪ್ರಕರಣ ದಾಖಲು ಮಾಡಿಕೊಂಡು ಕಾನೂನು ಕ್ರಮ ಕೈಗೊಳ್ಳಲಾಗಿದೆ.

ದಾಳಿಯಲ್ಲಿ ಅಬಕಾರಿ ನಿರೀಕ್ಷಕ ಸಣ್ಣ ಮಾರುತಿ, ಅಬಕಾರಿ ಉಪ ನಿರೀಕ್ಷಕ–01 ಅಮೃತ ಬಿಂದು, ಅಬಕಾರಿ ಪೇದೆ ತಿರುಪತಿ, ಗೃಹ ರಕ್ಷಕರಾದ ಚಂದ್ರಶೇಖರ, ನರೇಂದ್ರ, ಮಲ್ಲಮ್ಮ ಅವರು ಭಾಗಿಯಾಗಿದ್ದರು ಎಂದು ಅಬಕಾರಿ ಇಲಾಖೆಯ ಪ್ರಕಟಣೆ ತಿಳಿಸಿದೆ.

# ತಾಲೂಕಿನ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಸತಿ ನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಅಹ್ವಾನ

**ಮಾನ್ವಿ:** ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಿಂದ 2026–27 ನೇ ಸಾಲಿನಲ್ಲಿ ಮಾನ್ವಿ ತಾಲೂಕಿನ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಪಿ.ಯು.ಸಿ, ಪಿ.ಯು.ಸಿ. ಸಮಾನಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ಮಾನ್ವಿ ಕವಿತಾಳ್.ಸಿರವಾರ ಬಾಲಕರ ವಸತಿನಿಲಯ ಹಾಗೂ ಮಾನ್ವಿ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1,2ಎ,2ಬಿ,3ಎ,3ಬಿ, ಅನುಸೂಚಿತ ಜಾತಿ ಮತ್ತು ಪಂಗಡ ಮತ್ತು ಇತರೆ ಸಮುದಾಯಗಳಿಗೆ ಸೇರಿದ ವಿದ್ಯಾರ್ಥಿಗಳು ಜೂ.15



ರೊಳಗಾಗಿ https://shp.karnataka.gov.in/ ಅನ್ನು ಸಂದರ್ಶಿಸಿಅನ್ ಲೈನ್ ಮೂಲಕ ಪ್ರವೇಶಕ್ಕಾಗಿ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳನ್ನು ಮೇರಿಟ್ ಹಾಗೂ ಕೌನ್ಸಲಿಂಗ್ ಮೂಲಕ ಅಯ್ಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯ ಎ.ಪಿ.ಎಂ.ಸಿ. ಯಾರ್ಡ 2ನೇ ಗೇಟ್ ದೂ.9008900527 ಸಂರ್ಪಕಿಸಬಹುದು ಎಂದು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಭಾಗಯ್ಯ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮೇ 25 ರಂದು ಅಗ್ನಿವೀರ್ ನೇಮಕಾತಿ ರ್‍ಯಾಲಿಯ ಕುರಿತು ಕಾರ್ಯಗಾರ: ಚೆನ್ನಾರೆಡ್ಡಿ

ಧೈರ್ಯದ ದಾರಿ



**ಮಾನ್ವಿ :** ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ರಾಯಚೂರು ಜಿಲ್ಲಾ ಘಟಕ ಹಾಗೂ ಎ.ಆರ್.ಓ. ಬೆಳಗಾಂ,ಮತ್ತು 35 ಎನ್.ಸಿ.ಸಿ. ಬಿಎನ್, ರಾಯಚೂರು ಸಂಯಕ್ತಾಶ್ರಯದಲ್ಲಿ ಮೇ 25 ರಂದು ಬೆಳಿಗ್ಗೆ 11:00 ಗಂಟೆಗೆ ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ಆಡಿಟೋರಿಯಂನಲ್ಲಿ ಅಗ್ನಿವೀರ್ ನೇಮಕಾತಿ ರ್‍ಯಾಲಿಯ ಸಾಮಾನ್ಯ ಪ್ರವೇಶ ಪರೀಕ್ಷೆ ಪ್ರಕ್ರಿಯೆ ಕುರಿತು ಒಂದು ದಿನದ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದು. ರಾಯಚೂರು ಜಿಲ್ಲೆ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಅಂದಾಜು 650ಕ್ಕೂ ಹೆಚ್ಚು ಅಭ್ಯರ್ಥಿಗಳು 2027 ಸಾಲಿನಲ್ಲಿ ನಡೆಯುವ ಅಗ್ನಿವೀರ್ ನೇಮಕಾತಿ ರ್‍ಯಾಲಿಯ ಪ್ರಕ್ರಿಯೆಯಲ್ಲಿ ಭಾಗವಹಿಸಲು ಆನ್‌ಲೈನ್ ಮೂಲಕ ನೋಂದಾಯಿಸಿ ಕೊಂಡಿದು. ಅಂತಹ ವಿದ್ಯಾರ್ಥಿಗಳಿಗೆ ಕಾರ್ಯಗಾರದಲ್ಲಿ ಎ.ಆರ್.ಓ. ಬೆಳಗಾಂ,ಮತ್ತು 35 ಎನ್.ಸಿ.ಸಿ. ಬಿಎನ್, ಅಧಿಕಾರಿಗಳು ಅನುಭವ ಹೊಂದಿದ ಹಿರಿಯ ಸೇನಾಧಿಕಾರಿಗಳು, ಮಾಜಿ ಸೈನಿಕರು ಹಾಗೂ ತಜ್ಞರು ಸಾಮಾನ್ಯ ಪ್ರವೇಶ ಪರೀಕ್ಷೆ ತಯಾರಿಗೆ ಅಗತ್ಯವಿರುವ ಪರಿಚಯಾತ್ಮಕ ಮಾರ್ಗದರ್ಶನ ಮತ್ತು ತರಬೇತಿಯನ್ನು ಹಾಗೂ ಅಗ್ನಿವೀರ್ ನೇಮಕಾತಿ ಪ್ರಕ್ರಿಯ ಬಗ್ಗೆ ಪರೀಕ್ಷೆಯ ಮಾದರಿ, ತಯಾರಿಯ ತಂತ್ರಗಳು ಹಾಗೂ ದೈಹಿಕ ಮತ್ತು ಲಿಖಿತ ಪರೀಕ್ಷೆಗಳ ಕುರಿತು ಸಮಗ್ರ ಮಾಹಿತಿಯನ್ನು ನೀಡಲಿದ್ದಾರೆ ಅದ್ದರಿಂದ ಜಿಲ್ಲೆಯ ಅಗ್ನಿವೀರ್ ನೇಮಕಾತಿ ನೋಂದಾಯಿತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಗಾರದ ಸದುಪಯೊಗವನ್ನು ಪಡೆದುಕೊಳ್ಳುವಂತೆ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ರಾಯಚೂರು ಜಿಲ್ಲಾ ಘಟಕದ ಅಧ್ಯಕ್ಷರಾದ ಚೆನ್ನಾರೆಡ್ಡಿ ಪ್ರಕಟಣೆಯಲ್ಲಿ ಕೋರಿದ್ದಾರೆ

# ಉಚಿತ ಬೇಸಿಗೆ ತರಬೇತಿ ಶಿಬಿರದ ಸಮಾರೋಪ ಸಮಾರಂಭ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಸಿದ್ದರ್ಥ ಪದವಿ ಕಾಲೇಜಿನ ಸಭಾಂಗಣದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಹಾಗೂ ತಾಲೂಕ ವೀರಶೈವ ಲಿಂಗಾಯತ ಸಮಾಜ ಮಾನ್ವಿ ಸಂಯುಕ್ತ ಆಶ್ರಯದಲ್ಲಿ ನಡೆದ ಎಲ್ಲಾ ಸಮುದಾಯಗಳ 10ನೇ ತರಗತಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ಉಚಿತ ಬೇಸಿಗೆ ತರಬೇತಿ ಶಿಬಿರದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ತಾಲೂಕ ವೀರಶೈವ ಲಿಂಗಾಯತ ಸಮಾಜದ ಗೌರವಾಧ್ಯಕ್ಷರಾದ ಶ್ರೀಧರಸ್ವಾಮಿ ಮಾತನಾಡಿ ವಿದ್ಯಾರ್ಥಿಗಳ ಜೀವನದಲ್ಲಿ 10 ನೇ ತರಗತಿ ಅತ್ಯಂತ ಮಹಾತ್ವದ ಘಟವಾಗಿದು ತಾಲೂಕಿನ ಎಲ್ಲಾ ಸಮಾಜದ ಆತ್ಯಂತ ಹಿಂದುಳಿದ ಕುಟುಂಬದ ಮಕ್ಕಳು ಕೂಡ 10 ನೇ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದುಕೊಂಡು ಉನ್ನತ ವಿದ್ಯಾಭ್ಯಾಸವನ್ನು ಪಡೆದುಕೊಂಡು ಉತ್ತಮ ಜೀವನವನ್ನು ರೂಪಿಸಿಕೊಳ್ಳಲ್ಲಿ ಎನ್ನುವ ಉದ್ದೇಶದಿಂದ ಉಚಿತ ಬೇಸಿಗೆ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದು ನೂರಾರು ವಿದ್ಯಾರ್ಥಿಗಳು ಸಂಪನ್ಮೂಲ ವ್ಯಕ್ತಿಗಳಿಂದ ಅಗತ್ಯ ಮಾಹಿತಿಯನ್ನು ಪಡದುಕೊಳ್ಳುವ ಮೂಲಕ ಬೇಸಿಗೆ ಶಿಬಿರವನ್ನು ಸದುಪಯೋಗ ಪಡಿಸಿಕೊಂಡಿದ್ದಾರೆ ಎಂದು ತಿಳಿಸಿದರು.
ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಮಾನ್ವಿ ಘಟಕದ ಅಧ್ಯಕ್ಷರಾದ ಅರುಣ್ ಕುಮಾರ್ ಚಂದಾ ಮಾತನಾಡಿ ಕಳೆದ ಎರಡು ವರ್ಷಗಳಿಂದ 10 ನೇ ತರಗತಿಯ ವಿಷಯ ಪರಿಣಿತ ಸಂಪನ್ಮೂಲ ವ್ಯಕ್ತಿಗಳಿಂದ ಮಾನ್ವಿ ತಾಲೂಕಿನ ನೂರಾರು ವಿದ್ಯಾರ್ಥಿಗಳಿಗೆ ಬೇಸಿಗೆ ತರಬೇತಿ ಶಿಬಿರದಲ್ಲಿ ಉನ್ನತ ಗುಣಮಟ್ಟದ ತರಬೇತಿಯನ್ನು ನೀಡಲಾಗಿದೆ ಎಂದು ತಿಳಿಸಿದರು. ಬೇಸಿಗೆ ತರಬೇತಿ ಶಿಬಿರದಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ತರಬೇತಿಯುನ್ನು ನೀಡಿದ ಸಂಪನ್ಮೂಲ ವ್ಯಕ್ತಿಗಳಿಗೆ ಸನ್ಮಾನಿಸಲಾಯಿತು.



ತಾಲೂಕು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹರಪಾಟೀಲ್, ಜಗದೀಶ ಓತುರ್, ವೀರನಗೌಡಸಂಗಾಪುರ್, ಪ್ರದೀಪ್ ಪಾಟೀಲ್, ಹೊಯ್ಸಳ ಸ್ವಾಮಿ, ಶರಣಪ್ಪ ಮಾಸ್ತರ್ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಇದ್ದರು.

**ಮೊದಲನೇ ಪುಟದಿಂದ**

# ರಾಯಚೂರಿನಲ್ಲಿ 371(ಜೆ) ಹೋರಾಟಗಾರರ ಮಹತ್ವದ ಸಭೆ ಮೇ 24ಕ್ಕೆ

ಮಾಜಿ ಜನಪ್ರತಿನಿಧಿಗಳ ದುಂಡು ಮೇಜಿನ ಸಭೆ ಮತ್ತು ಸಮಾವೇಶವನ್ನು ಆಯೋಜಿಸಲಾಗಿದೆ.

ಸಭೆಗೆ ರಾಘವೇಂದ್ರ ಕುಷ್ಟಗಿ ಅಧ್ಯಕ್ಷತೆ ವಹಿಸಲಿದ್ದು, ಕಲ್ಯಾಣ ಕರ್ನಾಟಕದ ಹಿಂದುಳಿತನಕ್ಕೆ ಕಾರಣಗಳು ಮತ್ತು ಪರಿಹಾರೋಪಾಯಗಳ ಕುರಿತು ಚರ್ಚೆ ನಡೆಸಿ ಮುಂದಿನ ಹೋರಾಟದ ರೂಪುರೇಷೆಗಳನ್ನು ರೂಪಿಸಲಾಗುವುದು ಎಂದು ತಿಳಿಸಲಾಗಿದೆ.

ಪ್ರತಿ ಜಿಲ್ಲೆಯಿಂದ ಜನಪ್ರತಿನಿಧಿಗಳು, ಹೋರಾಟಗಾರರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಚಿಂತಕರು, ಸಾಹಿತಿಗಳು ಹಾಗೂ ಲೇಖಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಅನಿಲ್ ಕುಮಾರ್ ಬೆಲ್ದಾರ್ ಮನವಿ ಮಾಡಿದ್ದಾರೆ.

# ಮೂರು ವರ್ಷವಾದರೂ ಆರ್. ಅಶೋಕ್‌ಗೆ ಸರ್ಕಾರಿ ನಿವಾಸ ಸಿಕ್ಕಿಲ್ಲ

ಅಧಿಕೃತ ನಿವಾಸವಾಗಿ ಕೊಡಬೇಕು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಮತ್ತು ಮುಖ್ಯಮಂತ್ರಿಯವರಿಗೆ ಪತ್ರ ಬರೆದಿದ್ದರು. ಈ ಮೂರೂ ನಿವಾಸಗಳು ಖಾಲಿ ಇದ್ದು, ವಿಧಾನಸೌಧಕ್ಕೆ ಹತ್ತಿರದಲ್ಲೆ ಇರುವುದರಿಂದ ಮೂರರಲ್ಲಿ ಒಂದನ್ನು ಕೊಡುವಂತೆ ಅಶೋಕ ಕೋರಿದ್ದಾರೆ.

ಈ ಹಿಂದೆ ತಾವು ಸಚಿವರಾಗಿದ್ದಾಗ ತಮಗೆ ಹಂಚಿಕೆ ಆಗಿದ್ದ ರೇಸ್‌ವ್ಯೂ ಕಾಟೇಜ್ ನಿವಾಸ ಸಂಖ್ಯೆ-2ನ್ನು ಅಂದಿನ ಸಭಾಧ್ಯಕ್ಷರಿಗೆ ಬಿಟ್ಟುಕೊಟ್ಟಿದ್ದಾಗಿ ಎಂದು ಅವರು ಪತ್ರದಲ್ಲಿ ತಿಳಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ.

ಸಿ.ಎಂ ಮುಂದೆಯೇ ಅಸಮಾಧಾನ :
ಗುರುವಾರ ವಿಧಾನಸೌಧದಲ್ಲಿ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರ ಆಯ್ಕೆ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು ಸಭೆಗೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್, ವಿಧಾನಸಭೆಯ ಸಭಾಧ್ಯಕ್ಷ ಯು ಟಿ ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಭಾಗವಹಿಸಿದ್ದರು.

ಈ ವೇಳೆ ವಿಷಯ ಪ್ರಸ್ತಾಪಿಸಲು ಅಶೋಕ್ ಅವರು, ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ಪೂರ್ಣಗೊಳಿಸುತ್ತಿದೆ ಅಧಿಕೃತ ವಿಧಾನ ಸಭೆಯ ವಿರೋಧ ಪಕ್ಷದ ನಾಯಕನಿಗೆ ನಿಮ ಸರ್ಕಾರ ಒಂದು ಸರ್ಕಾರಿ ಬಂಗಲೇ ನೀಡದಿರುವುದು ಅತ್ಯಂತ ನಾಚಿಕೆಗೇಡಿನ ಸಂಗತಿ. ಒಬ್ಬ ವಿರೋಧ ಪಕ್ಷದ ನಾಯಕನನ್ನು ಈ ರೀತಿ ನಡೆಸಿಕೊಳ್ಳುವುದೇ? ಎಂದು ಖಾರವಾಗಿ ಪ್ರಶ್ನೆ ಮಾಡಿದ್ದಾರೆ.

ಹಿಂದೆ ನೀವು ವಿರೋಧ ಪಕ್ಷದ ನಾಯಕನಾಗಿದ್ದ ವೇಳೆ ನಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ನಿಮಗೆ ಕೇಳಿದ ಕಡೆ ಸರ್ಕಾರಿ ಬಂಗಲೆಯನ್ನು ಮಂಜೂರು ಮಾಡಿದ್ದೆವು ಮೂರು ವರ್ಷಗಳಲ್ಲಿ ನಾನು ಮುಖ್ಯ ಕಾರ್ಯದರ್ಶಿಯವರಿಗೆ ಆರು ಬಾರಿ ಪತ್ರ ಬರೆದಿದ್ದೇನೆ. ಆದರೂ ಒಂದು ನಿವಾಸ ಮಂಜೂರು ಮಾಡಲು ಸಾಧ್ಯವಾಗಿಲ್ಲ ಎಂದರೆ ಇದನ್ನು ಜವಾಬ್ದಾರಿತ ಸರ್ಕಾರ ಎಂದು ಕರೆಯಬೇಕೇ? ಮುಂದೆ ನಮ ಸರ್ಕಾರ ಬಂದರೆ, ನಾನು ಕೂಡಾ ಹೇಗೆ? ಯಾರಿಗೆ ? ಯಾವಾಗ ? ಮನೆ ಮಂಜೂರು ಮಾಡಬೇಕು ಎಂಬುದು ಗೊತ್ತಿದೆ ಎಂದು ಅಸಮಾಧಾನ ಹೊರ ಹಾಕಿದ್ದಾರೆ.

ಇದಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ ಅವರು ಇದು ಗಂಭೀರವಾದ ವಿಷಯ ನನಗೆ ಇವರಿಗೆ ಮಾಹಿತಿ ಇರಲಿಲ್ಲ ತಕ್ಷಣವೇ ನಿಮಗೆ ಸರ್ಕಾರಿ ಬಂಗಲೇ ಮಂಜುನಾಥ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವುದಾಗಿ ತಿಳಿಸಿದರು ಅಲ್ಲದೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ನಿರ್ಣಯವನ್ನು ಮಂಡಿಸುವುದಾಗಿ ಸಿಎಂ ಆಶ್ವಾಸನೆ ನೀಡಿದ್ದಾರೆ. ಅಲ್ಲದೆ ಸಭೆಯಲ್ಲಿ ಭಾಗಿಯಾಗಿದ್ದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಕೂಡಲೇ ಅಗತ್ಯವಿರುವ ಕಡೆ ನಿವಾಸ ಮಂಜೂರಾತಿಗೆ ಕ್ರಮ ತೆಗೆದುಕೊಳ್ಳುವಂತೆ ಸೂಚನೆ ಕೊಟ್ಟಿದ್ದಾರೆ ಎಂದು ತಿಳಿಸಿದ್ದಾರೆ.

# ಮಳೆಗೆ ಬೆಂಗಳೂರು ತತ್ತರ:ಧರೆಗುರುಳಿದ ಮರ:ರಸ್ತೆಗಳು ಜಲಮಯ

ಉರುಳಿದ್ದು, 100ಕ್ಕೂ ಹೆಚ್ಚು ರೆಂಬೆ-ಕೊಂಬೆಗಳು ಮುರಿದಿವೆ. ಮರಗಳು ಕಾರು, ಬೈಕ್ ಹಾಗೂ ವಿದ್ಯುತ್ ಕಂಬಗಳ ಮೇಲೆ ಬಿದ್ದ ಪರಿಣಾಮ ವಾಹನಗಳಿಗೆ ಭಾರೀ ಹಾನಿಯಾಗಿದ್ದು, ಅನೇಕ ಪ್ರದೇಶಗಳಲ್ಲಿ ರಾತ್ರಿ ಪೂರ್ತಿ ವಿದ್ಯುತ್ ವ್ಯತ್ಯಯ ಉಂಟಾಯಿತು.
ಜಯನಗರ, ಬಸವನಗುಡಿ, ರಾಜಾಜಿನಗರ, ವಿಜಯನಗರ, ಆರ್.ಟಿ.ನಗರ, ಶೇಷಾದ್ರಿಪುರಂ, ಚಾಮರಾಜಪೇಟೆ, ಜೆಪಿ ನಗರ, ಸದಾಶಿವನಗರ ಸೇರಿದಂತೆ 50ಕ್ಕೂ ಹೆಚ್ಚು ಪ್ರದೇಶಗಳಲ್ಲಿ ಮರಗಳು ಬಿದ್ದು ಸಂಚಾರಕ್ಕೆ ಅಡ್ಡಿಯಾಯಿತು. ಕೆಲವೆಡೆ ಮರ ತೆರವು ಕಾರ್ಯ ನಿಧಾನಗತಿಯಲ್ಲಿ ಸಾಗುತ್ತಿರುವುದಕ್ಕೆ ಸಾರ್ವಜನಿಕರು ಜಿಬಿಎ ಹಾಗೂ ನಗರ ಪಾಲಿಕೆಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮೆಜೆಸ್ಟಿಕ್, ಮಲ್ಲೇಶ್ವರಂ, ಮೈಸೂರು ರಸ್ತೆ, ಲಾಲ್‌ಬಾಗ್, ಕಬ್ಬನ್ ಪಾರ್ಕ್, ಕೆ.ಆರ್.ಮಾರ್ಕೆಟ್, ವಿಧಾನಸೌಧ, ವಸಂತನಗರ, ಮಾಗಡಿ ರಸ್ತೆ, ಬಸವೇಶ್ವರನಗರ ಸೇರಿದಂತೆ ಹಲವೆಡೆ ಆಲಿಕಲ್ಲು ಸಹಿತ ಭಾರೀ ಮಳೆಯಾಯಿತು. ರಸ್ತೆಗಳಲ್ಲಿ ನೀರು ನಿಂತ ಪರಿಣಾಮ ಟ್ರಾಫಿಕ್ ಜಾಮ್ ಉಂಟಾಗಿ ವಾಹನ ಸವಾರರು ಪರದಾಡಿದರು.

ರಾಜಾಜಿನಗರದ ವೆಸ್ಟ್ ಆಫ್ ಕಾರ್ಡ್ ರಸ್ತೆಯಲ್ಲಿ ಮರ ಬಿದ್ದು ರಸ್ತೆ ಬಂದ್ ಆಗಿದ್ದು, ಪರ್ಯಾಯವಾಗಿ ಸರ್ವಿಸ್ ರಸ್ತೆ ಬಳಕೆ ಮಾಡಲಾಯಿತು. ಸ್ಥಳಕ್ಕೆ ಆಗಮಿಸಿದ ಜಿಬಿಎ ಸಿಬ್ಬಂದಿ ಮರ ತೆರವು ಕಾರ್ಯ ನಡೆಸಿದರು.

ಇನ್ನೊಂದೆಡೆ ಮಹಾಲಕ್ಷ್ಮಿ ಲೇಔಟ್‌ನ ಪೈಪ್‌ಲೈನ್ ರಸ್ತೆಯಲ್ಲಿ ಬೃಹತ್ ಮರ ಮೂರು ಕಾರುಗಳ ಮೇಲೆ ಬಿದ್ದು ಸಂಪೂರ್ಣ ಜಖಂಗೊಂಡಿವೆ. ಮರ ತೆರವು ಕಾರ್ಯ ವಿಳಂಬವಾಗಿರುವುದಕ್ಕೂ ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೆಲವೆಡೆ ಅರ್ಧದಷ್ಟು ಮಾತ್ರ ಮರ ತೆರವು ಮಾಡಿ ಫುಟ್‌ಪಾತ್‌ಗಳಲ್ಲಿ ಬಿಟ್ಟು ಹೋಗಿರುವ ಆರೋಪವೂ ಕೇಳಿಬಂದಿದೆ.

ಮಳೆಯಿಂದ ಜಿಬಿಎ ವ್ಯಾಪ್ತಿಯ ಆರು ಕಂಟ್ರೋಲ್ ರೂಮ್‌ಗಳಿಗೆ 600ಕ್ಕೂ ಹೆಚ್ಚು ದೂರುಗಳು ಬಂದಿವೆ. ಮನೆಗಳಿಗೆ ನೀರು ನುಗ್ಗುವುದು, ವಿದ್ಯುತ್ ವ್ಯತ್ಯಯ, ಮರ ಬಿದ್ದು ರಸ್ತೆ ಬಂದ್ ಆಗಿರುವುದು ಸೇರಿದಂತೆ ಅನೇಕ ಸಮಸ್ಯೆಗಳ ಬಗ್ಗೆ ಸಾರ್ವಜನಿಕರು ದೂರು ನೀಡಿದ್ದಾರೆ. ದೂರುಗಳ ಇತ್ಯರ್ಥಕ್ಕೆ ಸಿಬ್ಬಂದಿ ಹಾಗೂ ಯಂತ್ರೋಪಕರಣಗಳ ಕೊರತೆ ಸ್ಪಷ್ಟವಾಗಿ ಗೋಚರಿಸಿತು.ಪ್ರತಿ ಮಳೆಯಲ್ಲೂ ಇದೇ ಸಮಸ್ಯೆ ಮರುಕಳಿಸುತ್ತಿದ್ದರೂ ಶಾಶ್ವತ ಪರಿಹಾರ ಕಾಣದಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ. ಮಳೆ ಬಂದರೆ ತಂಪು ನೀಡಬೇಕಾದ ನಗರದಲ್ಲಿ ಇದೀಗ ಭಯದ ವಾತಾವರಣ ನಿರ್ಮಾಣವಾಗಿದೆ.

4 ದಿನ ಭಾರೀ ಮಳೆ: ನಿನ್ನೆ ಸಂಜೆ ಬೆಂಗಳೂರು ನಗರದಲ್ಲಿ ಬಂದಂತಹ ಜೋರು ಗಾಳಿ, ಮಳೆಗೆ ಮರ, ವಿದ್ಯುತ್ ಕಂಬಗಳು ಧರೆ ಹಾಗೂ ವಾಹನದ ಬಿದ್ದಿರುವ ಘಟನೆ ಹೊಸ ತಿಪ್ಪಸಂದ್ರ ಬಡಾವಣೆಯ ಬಿ. ಡಿ. ಎ. ಲೇಔಟ್ ನ 2ನೇ ಮುಖ್ಯ ರಸ್ತೆ ಯಲ್ಲಿ ನಡೆದಿದೆ ಮತ್ತು ಇಡೀ ರಾತ್ರಿಯಿಂದ ಹಿಡಿದು ಇಧುವರೆಗೂ ಇಲ್ಲಿ ಪವರೇ (ಕಿಂತಿಜಡಿ) ಇಲ್ಲ.

ಇದೀಗ ರಾಜ್ಯದಲ್ಲಿ ಮುಂದಿನ ನಾಲ್ಕು ದಿನಗಳ ಕಾಲ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಬೆಂಗಳೂರು ನಗರ ಸೇರಿದಂತೆ ಎಂಟು ಜಿಲ್ಲೆಗಳಿಗೆ 'ಆರೆಂಜ್ ಅಲರ್ಟ್' ಘೋಷಿಸಲಾಗಿದ್ದು, 19 ಜಿಲ್ಲೆಗಳಿಗೆ 'ಯೆಲ್ಲೋ ಅಲರ್ಟ್' ಎಚ್ಚರಿಕೆ ನೀಡಲಾಗಿದೆ.
ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ತುಮಕೂರು, ರಾಯಚೂರು, ಯಾದಗಿರಿ, ಕಲಬುರ್ಗಿ ಹಾಗೂ ಬೀದರ್ ಜಿಲ್ಲೆಗಳಲ್ಲಿ ಬಿರುಗಾಳಿ, ಗುಡುಗು-ಮಿಂಚು ಸಹಿತ ಭಾರೀ ಮಳೆಯ ಸಾಧ್ಯತೆ ಇದೆ. ಬೆಂಗಳೂರಿನಲ್ಲಿ ಮುಂದಿನ ಮೂರು ದಿನಗಳ ಕಾಲ ಮಳೆಯ ತೀವ್ರತೆ ಹೆಚ್ಚಾಗುವ ಸಾಧ್ಯತೆ ಇದ್ದು, ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗುವ ಭೀತಿ ಎದುರಾಗಿದೆ.
ಹವಾಮಾನ ಇಲಾಖೆ ಸಾರ್ವಜನಿಕರು ಹಾಗೂ ರೈತರಿಗೆ ಎಚ್ಚರಿಕೆಯಿಂದ ಇರುವಂತೆ ಸೂಚಿಸಿದ್ದು, ಸಿಡಿಲು ಹಾಗೂ ಬಿರುಗಾಳಿ ಸಂದರ್ಭಗಳಲ್ಲಿ ಸುರಕ್ಷತಾ ಕ್ರಮಗಳನ್ನು ಅನುಸರಿಸುವಂತೆ ಮನವಿ ಮಾಡಿದೆ.

# ಪುರಾತನ ಕಾಲದ ಹಸ್ತಪ್ರತಿ, ಶಾಸನಗಳ ಸಂಗ್ರಹ ಇದ್ದಲ್ಲಿ ಮಾಹಿತಿ ನೀಡಿ: ಪೂವಿತಾ ಎಸ್.




ಧೈರ್ಯದ ದಾರಿ

**ರಾಯಚೂರು ಮೇ.22:** ಜಿಲ್ಲೆಯಾದ್ಯಂತ ಲಭ್ಯವಿರುವ ಶತಮಾನಗಳಷ್ಟು ಹಳೆಯ ಕೈಬರಹದ ಪತ್ರಗಳು, ಹಸ್ತಪ್ರತಿಗಳು, ಶಾಸನಗಳು ಹಾಗೂ ದಾಖಲೆಗಳ ಸಂಗ್ರಹವಿದ್ದಲ್ಲಿ ಮಾಹಿತಿ ನೀಡಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್.ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.
ಮೇ.21ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜ್ಞಾನ ಭಾರತ ಮಿಷನ್ ಯೋಜನೆಯಡಿ ರಾಷ್ಟ್ರೀಯ ಹಸ್ತ ಪ್ರತಿ ಸಮೀಕ್ಷಾ ಕಾರ್ಯಕ್ಕೆ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.
ಪ್ರಾಚೀನ ಕಾಲದ ಶಾಸನಗಳು, ಹಸ್ತ ಪ್ರತಿಗಳು, ಕೈಬರಹಗಳನ್ನು ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಅತ್ಯಂತ ಪುರಾತನ, ಹಳೆಯ ದಾಖಲೆಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ ಡಿಜಟಲೀಕರಣಗೊಳಿಸಲು ಸರ್ಕಾರವು ಜ್ಞಾನ ಭಾರತಂ ಮಿಷನ್ ಯೋಜನೆ ಜಾರಿಗೆ ತಂದಿದೆ ಎಂದರು.
ರಾಷ್ಟ್ರ, ರಾಜ್ಯ, ಕರ್ನಾಟಕದ ಸೀಮಂತ ಸಂಸ್ಕೃತ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆ ಮೂಲಕ ಸಾರ್ವಜನಿಕ ಪ್ರವೇಶವನ್ನು ಒದಗಿಸಿ ಭವಿಷ್ಯದ ಪೀಳಿಗೆಗೆ ಅವುಗಳ ಜ್ಞಾನ ಸಂಪತ್ತಿನ ಸಂರಕ್ಷಣೆ ಮತ್ತು ಬಳಕೆಗೆ ಹಸ್ತ ಪ್ರತಿಗಳ ಸಂರಕ್ಷಣೆ ಹಾಗೂ ಡಿಜಟಲೀಕರಣಗೊಳಿಸಲಾಗುತ್ತಿದೆ ಎಂದರು.
ಜಿಲ್ಲೆಯಾದ್ಯಂತ ಗ್ರಂಥಾಲಯಗಳು, ದೇವಾಲಯಗಳು, ಮಠಗಳು, ಶೈಕ್ಷಣಿಕ ಸಂಸ್ಥೆಗಳು, ಧಾರ್ಮಿಕ ಸಂಸ್ಥೆಗಳು, ಪ್ರಾಚೀನ ಸಂಸ್ಥಾನಗಳು, ಪ್ರಾಚೀನ ಮನೆತನಗಳಲ್ಲಿ ಪುರಾತನ ಕಾಲದ ಅಪರೂಪದ ಹಸ್ತ ಪ್ರತಿ, ದಾಖಲೆಗಳ ಸಂಗ್ರಹ ಇರಬಹುದು. ಅವುಗಳ ಬಗ್ಗೆ ಇತಿಹಾಸಕಾರರು, ಸಂಶೋಧಕರು, ಸಾರ್ವಜನಿಕರು ಮಾಹಿತಿ ನೀಡಿ ಸಮೀಕ್ಷಾ ಕಾರ್ಯಕ್ಕೆ ಸಹಕರಿಸಬೇಕೆಂದು ಜಿಲ್ಲಾಧಿಕಾರಿಗಳು ಕೋರಿದರು.
ಸಾರ್ವಜನಿಕರು ಹಸ್ತಪ್ರತಿಗಳ ಬಗ್ಗೆ ಮಾಹಿತಿ ನೀಡುವುದರಿಂದ ಸರ್ಕಾರ ಅವುಗಳನ್ನು ವಶಪಡಿಸಿಕೊಳ್ಳಲಿದೆ. ಸಮಸ್ಯೆ ಆಗುತ್ತದೆ ಎಂಬ ಆತಂಕ, ಗೊಂದಲ ಬೇಡ. ಮಾಲಿಕರ ಅನುಮತಿಯೊಂದಿಗೆ ಅವುಗಳ ಡಿಜಿಟಲೀಕರಣಗೊಳಿಸಿ ಮೂಲ ಪ್ರತಿ ಅವರ ಬಳಿಯೇ ಉಳಿಸಲಾಗುವುದೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.
ಮಾಹಿತಿ ಎಲ್ಲಿ ನೀಡಿ: ಸಾರ್ವಜನಿಕರು ಹಸ್ತ ಪ್ರತಿಗಳ ಬಗ್ಗೆ ಮಾಹಿತಿ ನೀಡಲು ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಗಣೇಶ ಗುಡಿ ಹತ್ತಿರ, ನಿಜಲಿಂಗಪ್ಪ ಕಾಲೋನಿ, ರಾಯಚೂರು-584101 ದೂರವಾಣಿ ಸಂಖ್ಯೆ: 08532-200677 ಅಥವಾ ಇಮೇಲ್: adtourismrcr@gmail.com ಸಂಪರ್ಕ ಮಾಡಬಹುದಾಗಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಜೀರ್ ಅಹ್ಮದ್ ಅವರು ಹೇಳಿದರು.
ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪುರಾತತ್ವ ಸಂರಕ್ಷಣಾಧಿಕಾರಿ ಶಿವಬಸವ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವ್ಹಾರಗಳ ಇಲಾಖೆಯ ಜಿಲ್ಲಾ ವ್ಯವಸ್ಥಾಪಕ ಜಿ.ಹರೀಶ, ಪ್ರವಾಸೋದ್ಯಮ ಇಲಾಖೆಯ ಪ್ರಥಮ ದರ್ಜೆ ಸಹಾಯಕಿ ಕವಿತಾ ಅವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# 3 ಸ್ಟಾರ್ ರೇಟಿಂಗ್: ಸಾರ್ವಜನಿರು ಪಾಲಿಕೆಯೊಂದಿಗೆ ಕೈಜೋಡಿಸಲು ಮನವಿ

**ರಾಯಚೂರು ಮೇ.22:** ರಾಯಚೂರು ಮಹಾನಗರ ಪಾಲಿಕೆ ಸ್ವಚ್ಛ ಸರ್ವೇಕ್ಷಣ್-2026ರ ಮೌಲ್ಯ ಮಾಪನದ ಅಡಿಯಲ್ಲಿ ಗಾರ್ಬೇಜ್ಫ್ರೀಸಿಟಿ (ಜಿ.ಎಫ್.ಸಿ) 3 ಸ್ಟಾರ್ ರೇಟಿಂಗ್ಗೆ ರಾಯಚೂರು ಮಹಾನಗರ ಪಾಲಿಕೆಯು ಅರ್ಜಿ ಸಲ್ಲಿಸುತ್ತಿದ್ದು, ಸಾರ್ವಜನಿರು ಪಾಲಿಕೆಯೊಂದಿಗೆ ಕೈಜೋಡಿಸಬೇಕೆಂದು ಕೋರಲಾಗಿದೆ.
ಎಲ್ಲಾ ನಾಗರಿಕರು ಪರಿಣಾಮಕಾರಿ ಘನತ್ಯಾಜ್ಯ ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಸ್ವಚ್ಛತೆಯ ಮಾನದಂಡಗಳನ್ನು ಕಾಪಾಡಿಕೊಳ್ಳಲು ನಗರವು ಸಾಕಷ್ಟು ತ್ಯಾಜ್ಯ ಸಂಸ್ಕರಣಾ ಸೌಲಭ್ಯಗಳನ್ನು ಸ್ಥಾಪಿಸಿದೆ. ಸರಿಯಾದ ತ್ಯಾಜ್ಯ ವಿಂಗಡಣೆ ಪದ್ಧತಿಗಳನ್ನು ಅನುಸರಿಸುವ ಮೂಲಕ ಮತ್ತು ನಗರವನ್ನು ಸ್ವಚ್ಛ ಮತ್ತು ನೈರ್ಮಲ್ಯವಾಗಿಡಲು ಕೊಡುಗೆ ನೀಡುವ ಮೂಲಕ ಈ ಮೌಲ್ಯ ಮಾಪನ ಪ್ರಕ್ರಿಯೆಯಲ್ಲಿ ಎಲ್ಲಾ ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆ ಕಡ್ಡಾಯವಾಗಿದ್ದು, ದಯವಿಟ್ಟು ನಿಮ್ಮ ಮನೆಯಲ್ಲಿಯೇ ಒಣ ಕಸ ಮತ್ತು ಆರ್ದ್ರಕಸವನ್ನು ಪ್ರತ್ಯೇಕವಾಗಿ ಎರಡು ಡಬ್ಬಗಳಲ್ಲಿ ಸಂಗ್ರಹಿಸಿ. ನಗರಸಭೆಯ ವಾಹನ ಬಂದಾಗ ಮಾತ್ರ ಹೊರಗಿಡಬೇಕು. ಒಣಕಸವನ್ನು ಪ್ಲಾಸ್ಟಿಕ್, ಕಾಗದ, ಗಾಜು ಎಂದೂ ಪ್ರತ್ಯೇಕಿಸಿದರೆ ಅದು ಮರು ಬಳಕೆಗೆ ಸಹಕಾರಿಯಾಗಿದೆ.
ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯಬೇಡಿ: ರಸ್ತೆ, ನಾಲಾ, ಖಾಲಿ ಜಾಗಗಳಲ್ಲಿ ಕಸ ಎಸೆಯುವುದನ್ನು ತಪ್ಪಿಸಿ. ಸ್ವಚ್ಛತೆಗಾಗಿ ಇರಿಸಲಾಗಿರುವ ತೊಟ್ಟಿಗಳನ್ನು ಮಾತ್ರ ಬಳಸಿಬೇಕು. ಪ್ಲಾಸ್ಟಿಕ್ನಿಷೇಧವನ್ನು ಪಾಲಿಸಬೇಕು. ಶಾಪಿಂಗ್ಗೆ ಹೋದಾಗ ಬಟ್ಟೆಯ ಚೀಲಗಳನ್ನು ಬಳಸಬೇಕು. ನಿಮ್ಮ ಸುತ್ತಮುತ್ತಲಿನಲ್ಲಿ ಕಸ ತುಂಬಿಕೊಂಡಿದ್ದರೆ, ಸಾರ್ವಜನಿಕಸ್ಥಳ ಅಶುದ್ಧವಾಗಿದ್ದರೆ, ಅದರ ಫೋಟೋತೆಗೆದು ಸ್ವಚ್ಛತಾ ಅಫ್ ಅಥವಾ ಮೈಗವ್ ಅಫ್ ಮೂಲಕ ದೂರು ನೋಂದಾಯಿಸಬಹುದಾಗಿದೆ. ಇದರಿಂದ ಸಮಸ್ಯೆ ಪರಿಹಾರವಾಗುವುದರ ಜೊತೆಗೆ ನಮ್ಮ ನಗರದ ದೂರು ನಿವಾರಣಾ ಸಾಮರ್ಥ್ಯವೂ ಹೆಚ್ಚಾಗುತ್ತದೆ. ಸ್ವಚ್ಛತಾ ಸಂಬಂಧಿ ನಿಮ್ಮಅಭಿಪ್ರಾಯವನ್ನು ವೋಟ್ಫಾರ್ಮೈಸಿಟಿ ಅಫ್ ಮೂಲಕ ದಾಖಲಿಸಿ. ನಾಗರಿಕರ ಪ್ರತಿಕ್ರಿಯೆಗೆ ಸರ್ವೇಕ್ಷಣೆಯಲ್ಲಿ ಪ್ರತ್ಯೇಕ ಅಂಕಗಳಿದ್ದು, ನಿವಾಸಿಗಳು ತಮ್ಮ ಸಂಪೂರ್ಣ ಬೆಂಬಲ ಮತ್ತು ಸಹಕಾರವನ್ನು ನೀಡುವಂತೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗೃಹಲಕ್ಷ್ಮಿ ಯೋಜನೆಯಲ್ಲಿ 5 ಸಾವಿರ ಕೋಟಿ ಲೂಟಿ: ನಿಖಿಲ್ ಆರೋಪ

**ಬೆಂಗಳೂರು.ಮೇ22**: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಲ್ಲೊಂದಾದ 'ಗೃಹಲಕ್ಷ್ಮಿ' ಹೆಸರಿನಲ್ಲಿ ಭಾರಿ ಅವ್ಯವಹಾರ ನಡೆದಿದೆ ಎಂದು ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದ್ದಾರೆ.
ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಇಂದು ನಡೆಸಿ ಮಾತನಾಡಿದ ಅವರು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಲ್ಲದೆ, ನೇರ ಸವಾಲುಗಳನ್ನು ಎಸೆದಿದ್ದಾರೆ.ನಿಖಿಲ್ ಸ್ಟೇಟಸ್ ಏನು ಎಂಬ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಟೀಕೆಗೆ ತಿರುಗೇಟು ನೀಡಿದ ನಿಖಿಲ್, "ನಾನು ಕನ್ನಡ ನಾಡಿನ ಹುಡುಗ, ಇಲ್ಲಿನ ತೆರಿಗೆದಾರ. ನಾಡಿನ ಜನರ ಪರವಾಗಿ ಒಬ್ಬ ಸಾಮಾನ್ಯ ಪ್ರಜೆಯಾಗಿ ಪ್ರಶ್ನೆ ಮಾಡುತ್ತಿದ್ದೇನೆ, ಇದೇ ನನ್ನ ಸ್ಟೇಟಸ್" ಎಂದರು. ಮುಂದುವರಿದು, "ಡಿಸಿಎಂ ಅವರು ಬೇಕಿದ್ದರೆ 'ಕಾಕ್ರೋಜ್ ಪಾರ್ಟಿ'ಗೆ ಅಧ್ಯಕ್ಷರಾಗಲಿ. ಅವರ ನೇತೃತ್ವದಲ್ಲೇ ಪಕ್ಷ ಕಟ್ಟಿ, ಮುಂಬರುವ ಚುನಾವಣೆಯಲ್ಲಿ 50 ಸೀಟುಗಳನ್ನು ಗೆದ್ದು ತೋರಿಸಲಿ ನೋಡೋಣ" ಎಂದು ನೇರ ಸವಾಲು ಹಾಕಿದರು.ರಾಜ್ಯ ಸರ್ಕಾರದ ವಿರುದ್ಧ ದೊಡ್ಡ ಆರ್ಥಿಕ ಹಗರಣದ ಆರೋಪ ಹೊರಿಸಿದ ನಿಖಿಲ್ ಕುಮಾರಸ್ವಾಮಿ, ಗೃಹಲಕ್ಷ್ಮಿ ಯೋಜನೆಯ ಹಣ ಬಿಡುಗಡೆಯಲ್ಲಿ ತಾರತಮ್ಯ ಎಸಗಲಾಗಿದೆ ಎಂದು ಅಂಕಿ-ಅಂಶಗಳನ್ನು ಮುಂದಿಟ್ಟರು.ಅಂಕಿ-ಅಂಶಗಳ ಲೆಕ್ಕಾಚಾರ: 2024-25ರ ಆರ್ಥಿಕ ವರ್ಷದಲ್ಲಿ ಒಟ್ಟು 1 ಕೋಟಿ 28 ಲಕ್ಷ ಗೃಹಲಕ್ಷ್ಮಿ ಫಲಾನುಭವಿಗಳಿದ್ದಾರೆ. ಬಜೆಟ್‌ನಲ್ಲಿ ನಿಗದಿಪಡಿಸಿದ ಲೆಕ್ಕಾಚಾರದ ಪ್ರಕಾರ ವರ್ಷಕ್ಕೆ 28 ಸಾವಿರ ಕೋಟಿ ರೂ. ವೆಚ್ಚವಾಗಬೇಕಿತ್ತು. ಆದರೆ, ಸರ್ಕಾರ ಕೇವಲ 10 ತಿಂಗಳಿಗೆ ಮಾತ್ರ ಅಂದರೆ 23 ಸಾವಿರ ಕೋಟಿ ರೂ. ಮಾತ್ರ ಜಮಾ ಮಾಡಿದೆ.

ಕಾಣೆಯಾದ 5 ಸಾವಿರ ಕೋಟಿ ಎಲ್ಲಿದೆ: 2025ರ ಫೆಬ್ರವರಿ ಮತ್ತು ಮಾರ್ಚ್ ತಿಂಗಳ 2 ಕಂತುಗಳ ಒಟ್ಟು 5 ಸಾವಿರ ಕೋಟಿ ರೂ. ಹಣವನ್ನು ಮಹಿಳೆಯರ ಖಾತೆಗೆ ಹಾಕಿಲ್ಲ. ಆರ್ಥಿಕ ಇಲಾಖೆ ಈ ಹಣ ಬಿಡುಗಡೆ ಮಾಡದಿರುವುದನ್ನು ಸಚಿವರೇ ಸದನದಲ್ಲಿ ಒಪ್ಪಿಕೊಂಡಿದ್ದಾರೆ.

ಚುನಾವಣೆಗೆ ಬಳಕೆ ಆಯಿತೇ?: "ಈ 5 ಸಾವಿರ ಕೋಟಿ ರೂ. ಹಣ ಎಲ್ಲಿ ಹೋಯಿತು? ಇದನ್ನು ಚುನಾವಣೆಗೆ ಬಳಕೆ ಮಾಡಿದ್ದೀರಾ ಅಥವಾ ಬೇರೆ ಯಾವುದಕ್ಕೆ ವರ್ಗಾಯಿಸಿದ್ದೀರಾ ಇದಕ್ಕೆ ಮುಖ್ಯಮಂತ್ರಿಗಳೇ ನೇರ ಹೊಣೆ, ಅವರು ಉತ್ತರ ನೀಡಬೇಕು" ಎಂದು ಒತ್ತಾಯಿಸಿದರು.
"ಯೋಜನೆ ಆರಂಭವಾದಾಗಿನಿಂದ ಒಟ್ಟು 21 ಕಂತುಗಳನ್ನು ನೀಡಬೇಕಿತ್ತು. ಆದರೆ 2023-24ರಲ್ಲಿ 8 ಕಂತು, 2024-25ರಲ್ಲಿ 10 ಕಂತು ಮಾತ್ರ ನೀಡಲಾಗಿದೆ. ಸದನದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸುಳ್ಳು ಹೇಳಿ ಎರಡು ಕಂತಿನ ಹಣವನ್ನು ಮುಚ್ಚಿಟ್ಟಿದ್ದಾರೆ. ಶಾಸಕ ಮಹೇಶ್ ತೆಂಗಿನಕಾಯಿ ಈ ವಿಚಾರವನ್ನು ಬಹಿರಂಗಪಡಿಸಿದ್ದು, ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. 2025ರ ಡಿಸೆಂಬರ್ ಅಧಿವೇಶನದಲ್ಲಿ ಕೇಳಿದ ಪ್ರಶ್ನೆಗೆ 5 ತಿಂಗಳಾದರೂ ಉತ್ತರವಿಲ್ಲ. ಇದು ಸಿಎಂ ಕಚೇರಿಯಲ್ಲಿ ಮುಚ್ಚಿಡುವ ದಾಖಲೆಯಲ್ಲ, ಜನರ ಮುಂದೆ ಇಡಬೇಕಾದ ವಿಚಾರ."

ಈಗಾಗಲೇ ಈ ಕುರಿತು ಮಹಿಳೆಯರು ಹೈಕೋರ್ಟ್‌ನಲ್ಲಿ ಪಿಐಎಲ್ (ಸಾರ್ವಜನಿಕ ಹಿತಾಸಕ್ತಿ ಅರ್ಜಿ) ಸಲ್ಲಿಕೆ ಮಾಡಿದ್ದು, ನ್ಯಾಯಾಲಯ ಸರ್ಕಾರಕ್ಕೆ ಚಾಟಿ ಬೀಸಲಿದೆ. ಇದರ ವಿರುದ್ಧ ಜೆಡಿಎಸ್ ದೊಡ್ಡ ಮಟ್ಟದ ಹೋರಾಟ ರೂಪಿಸಲಿದೆ ಎಂದು ಎಚ್ಚರಿಸಿದರು.ಬಿಡದಿ ಕೈಗಾರಿಕಾ ಮಹಾ ಯೋಜನೆ ಅಥವಾ ಇಂಟಿಗ್ರೇಟೆಡ್ ಟೌನ್‌ಶಿಪ್‌ಗಾಗಿ ಭೂಸ್ವಾಧೀನ ಪ್ರಕ್ರಿಯೆ ನಡೆಸುತ್ತಿರುವ ಸರ್ಕಾರದ ನಿಲುವನ್ನು ನಿಖಿಲ್ ತೀವ್ರವಾಗಿ ಖಂಡಿಸಿದರು. ಈ ಯೋಜನೆ ಹಿಂದೆ ಹೆಚ್.ಡಿ. ಕುಮಾರಸ್ವಾಮಿ ಅವರ ಕನಸಿನ ಕೂಸಾಗಿದ್ದರೂ, ಅಂದು 'ಕೃಷ್ಣಾ' ಕಚೇರಿಯಲ್ಲಿ ರೈತರೊಂದಿಗೆ ಸಭೆ ನಡೆಸಿದ ಬಳಿಕ ಅವರ ಮನವಿಗೆ ಸ್ಪಂದಿಸಿ ಯೋಜನೆಯನ್ನು ಕೈಬಿಡಲಾಗಿತ್ತು ಎಂದು ನೆನಪಿಸಿದರು.ಆದರೆ ಈಗಿನ ಸರ್ಕಾರ ಇದನ್ನು ಪ್ರತಿಷ್ಠೆಯಾಗಿ ತಗೆದುಕೊಂಡಿದೆ. ಅಲ್ಲಿ ರೈತರೇ ಇಲ್ಲ ಎಂದು ಡಿಸಿಎಂ ಹಠ ಹಿಡಿದಿದ್ದಾರೆ. ಕೃಷಿ ಜಮೀನನ್ನೇ ಏಕೆ ರೈತರಿಂದ ಬಲವಂತವಾಗಿ ಕಿತ್ತುಕೊಳ್ಳುತ್ತಿದ್ದೀರಿ ಡಿಸಿಎಂ ಮೊದಲು ಹಳ್ಳಿಗಳಿಗೆ ಬಂದು ರೈತರ ಕ್ಷಮೆ ಕೇಳಲಿ ಎಂದರು.ಅಷ್ಟೊಂದು ಮಾತಾಡುವ ಡಿಸಿಎಂ, ಈ ಯೋಜನೆಯಲ್ಲಿ ಸ್ಥಳೀಯರಿಗೆ ಕಡ್ಡಾಯವಾಗಿ ಶೇ. 50 ರಷ್ಟು ಉದ್ಯೋಗ ನೀಡಲೇಬೇಕು ಎಂಬ ಕಾನೂನನ್ನು ತರಲಿ ನೋಡೋಣ, ಆಗ ನಾನು ಒಪ್ಪುತ್ತೇನೆ. ಕುಮಾರಸ್ವಾಮಿ ಅವರಿಗೆ ಚಾಲೆಂಜ್ ಮಾಡುವುದನ್ನು ಬಿಟ್ಟು ರೈತರ ಪ್ರಶ್ನೆಗಳಿಗೆ ಉತ್ತರಿಸಲಿ. ನಾನು ಯಾವುದೇ ಸ್ಟೇಟಸ್ ಇಲ್ಲದೆ ಕಾಮನ್ ಮ್ಯಾನ್ ಆಗಿ ಹಳ್ಳಿಗಳಿಗೆ ಬರಲು ಸಿದ್ಧ" ಎಂದು ಸವಾಲು ಹಾಕಿದರು.

# "ಇದು ಅಡ್ಮಿಷನ್ ಟೈಮ್ "

ಆತ್ಮೀಯ ಪಾಲಕರೇ ಈ ಕ್ಷಣ ಮಕ್ಕಳ ಮುಂದಿನ ಭವಿಷ್ಯದ ಹೇಗಿರಬೇಕು ಎಂದು ಊಹಿಸಲು ಇಂದು ನಿರ್ಧಾರ ತೆಗೆದುಕೊಳ್ಳುವ ಸಮಯ. ತಾವೆಲ್ಲಾ ಹಾಟ್ ಸೀಟಿನ ಮೇಲೆ ಕೂತಿದ್ದಿರಿ ನಿಮಗೆ 5 ಕೋಟಿಯ ಪ್ರಶ್ನೆ ಕೇಳಿದಾಗ ಹೇಗೆಲ್ಲಾ ಆಲೋಚಿಸುತ್ತಿರೋ ಹಾಗೆಯೇ ನಿಮ್ಮ ಮಕ್ಕಳ ಮುಂದಿನ ಭವಿಷ್ಯ ಕೋರ್ಸ್ ಅಡ್ಮಿಷನ್ ಮಾಡಿಸುವ ಈ ಹಂತದಲ್ಲಿ ತುಂಬಾ ವಿಶೇಷ ಅರ್ಥಪೂರ್ಣ ನಿರ್ಧಾರ ಆಯ್ಕೆ ಮಾಡಿಕೊಳ್ಳಿ.

**ಗಮನಿಸುವ ಅಂಶಗಳು:-**

*** ಕೋರ್ಸ್ ಆಯ್ಕೆ ಮಾಡುವಾಗ ಅವರ ಪೆವರಿಟ್ ಗುರುಗಳ ಮಾರ್ಗದರ್ಶನ ಪಡೆಯುವುದು ಸೂಕ್ತ.**

*** ಈ ವಯಸ್ಸು ಸರಿಯಾದ ನಿರ್ಧಾರ ತೆಗೆದುಕೊಳ್ಳುವ ಹಂತ ಅಲ್ಲ ಹಾಗಾಗಿ ನಿಮ್ಮ ಭಾಗವಹಿಸುವಿಕೆ ತುಂಬಾ ಮುಖ್ಯ.**

*** ಮಗುವಿನ ಆಸಕ್ತಿ ಅವದಾನ ಅಭಿಪ್ರೇರಣೆಯನ್ನು ಸೂಕ್ಷ್ಮವಾಗಿ ಗಮನಿಸಿ ಮುಂದಿನ ಹೆಜ್ಜೆ ಹಾಕಿ.**

*** ಮಕ್ಕಳ ಸಾಮರ್ಥ್ಯ ಮತ್ತು ದೌರ್ಬಲ್ಯವನ್ನು ಗಮನದಲ್ಲಿಟ್ಟು ನಿರ್ಧಾರಿಸಿ.**

*** ಮಕ್ಕಳು ತಾವು ಸ್ವತಃ ಕೋರ್ಸ್ ಆಯ್ಕೆ ಮಾಡಿಕೊಳ್ಳಲು ಬಿಡಿ.**

*** ನಿಮ್ಮ ಸಲಹೆ ಮತ್ತು ಮಾರ್ಗದರ್ಶನ ಕೊಡಿ.**

*** ಅವರ ಕಣ್ಣಲ್ಲಿ ನಿಮ್ಮ ಕನಸ್ಸು ತುಂಬಿ**

*** ಅವರು ಏನಾಗಬೇಕು ಎಂದು ಭಾವಿಸಿದ್ದಿರಿ ಅದನ್ನು ಅವರಿಗೆ ಸರಳವಾಗಿ ಅರ್ಥ ಮಾಡಿಸಿ.**

*** ಕೋರ್ಸ್ ನ ಮುಂದಿನ ಅನುಕೂಲಗಳ ಬಗ್ಗೆ ನೈಜ್ಯ ನಿದರ್ಶನಗಳನ್ನು ತೊರಿಸಿ.**

*** ಮಕ್ಕಳ ಸಾಮಾರ್ಥ್ಯ ಅರ್ಥ ಮಾಡಿಕೊಳ್ಳಿ.**

*** ಎಲ್ಲಾ ಕೋರ್ಸ್ ಮತ್ತು ಕಾಲೇಜುಗಳ ಬಗ್ಗೆ ಮಾಹಿತಿ ಇರಲಿ.**

*** ಗೆಳೆಯ/ತಿ ಎಲ್ಲಿ ಅಡ್ಮಿಷನ್ ಮಾಡಿದ್ದಾರೆ ಅಲ್ಲಿಯೇ ಮಾಡುವ ಪ್ರಸಂಗ ಜಾಸ್ತಿ ಅದರ ಸಾದಕ ಬಾದಕ ತಿಳಿಸಿ.**

*** ನಿಮ್ಮ ಜೀವನದ ಕಷ್ಟ ಸುಖದ ಪರಿಸ್ಥಿತಿಯನ್ನು ಮಕ್ಕಳಿಗೆ ಅರ್ಥ ಮಾಡಿಸಿ.**

*** ನಿರ್ಧಾರ ಯಾರು ಮಾಡುತ್ತಾರೆ ಅವರು ಮುಂದಿನ ಸಂತೋಷನೊ/ಕಷ್ಟನೋ ಅದರ ಹೊಣೆಗಾರಾಗುತ್ತಾರೆ.**

*** ಮನದಲ್ಲಿ ಯಾವುದನ್ನು ನಿರ್ಧಾರಿಸಿರುತ್ತಾರೋ ಅದನ್ನು ಮಾಡಲು ದಾರಿ ಹುಡುಕುವುದು ಸಹಜ.**

*** ವಿಷಯುಗಳನ್ನು ಆಯ್ಕೆ ಮಾಡುವಾಗ ಅದರ ಸಂಪೂರ್ಣ ಜ್ಞಾನ ಮತ್ತು ದಾರಿಯ ಮಾಹಿತಿ ಪಡೆದುಕೊಳ್ಳಿ.**

*** ಮಕ್ಕಳ ಪ್ರತಿಭೆಯಾದಾರಿತ ಶಿಕ್ಷಣ ಬೇಕು.**

*** ಮುನ್ನಾಲೋಚನೆ ಇರಲಿ ಆದರೇ ಅತೀಯಾದ ಒತ್ತಡ ಬೇಡ.**

*** ಯಾವ ಕೋರ್ಸ್ ನಂತರ ಏನು ಕೋರ್ಸ್, ಎಷ್ಟು ವರ್ಷ, ಪರೀಕ್ಷೆಯ ಮಾದರಿ ಕುರಿತು ಮುಂದಿನ ಹಾದಿ ಮತ್ತು ಅನುಕೂಲಗಳು ಉದ್ಯೋಗಾವಕಾಶಗಳ ಬಗ್ಗೆ ವಿಸ್ತಾರವಾಗಿ ತಿಳಿ ಹೇಳಿ.**

*** ಕೋರ್ಸ್ ಗಳಲ್ಲಿ ಕನಿಷ್ಟ ಗರಿಷ್ಟ ಇಲ್ಲ. ಎಲ್ಲಾವು ಅದರದ್ದೇ ಆದ ಘನತೆ ಮತ್ತು ಗೌರವ ಇದೆ.**

ಇಂದಿನ ಮಕ್ಕಳಿಗೆ ನಾವು ಅದು ಬೇಡ ಇದು ಮಾಡು ಎಂದು ಘಟ್ಟಿಯಾಗಿ ಹೇಳಿದರೂ ಅವರು ಕೇಳುವ ಪರಿಸ್ಥಿತಿ ನಲ್ಲಿರುವುದಿಲ್ಲ ಕಾರಣ ಅವರ ಅಲೋಚನೆ ಆಸಕ್ತಿ ಬೇರೆಯವಾಗಿರುತ್ತದೆ. ನಾವು ಅವರ ದಾರಿಯಲ್ಲಿಯೇ ಹೋಗಿ ದೃಷ್ಟಾಂತ ಮೂಲಕ ತೋರಿಸಿ ಅನುಭವಕ್ಕೆ ತಂದು ಅರ್ಥ ಮಾಡಿಸಬೇಕು. ಕೇಳಲ್ಲಿಲ್ಲ ಎಂದಾದಾಗ ಅವರಿಷ್ಟಕ್ಕೆ ಬಿಡಬೇಕು ಇಲ್ಲ ಮುಂದಿನ ಅಗು ಹೊಗುಗಳಿಗೆ ನಾವೇ ಹೊಣೆ ಹೊರಬೇಕಾದಿತು. ಮಕ್ಕಳನ್ನು ನಿಮ್ಮ ಆಶಯಕ್ಕೆ ತೆಗೆದುಕೊಂಡು ಮನೆಯಲ್ಲಿ ಎಲ್ಲಾರೂ ಕೂತು ಸಮಾದಾನವಾಗಿ ಅಲೋಚಿಸಿ ಸಾದಕ-ಬಾದಕ, ಲಾಭ-ನಷ್ಟಗಳ ಕುರಿತು ಸುದೀರ್ಘವಾಗಿ ಚರ್ಚಿಸಿ ಕೋರ್ಸ್ ನ ನಿರ್ಧಾರ ತೆಗೆದುಕೊಳ್ಳಿ.

**"ಆತುರದ ನಿರ್ಧಾರ ಜೀವನದ ದೊಡ್ಡ ನಷ್ಟ"**

ತಾಯಿ ಇಲ್ಲದ ಒಬ್ಬ ಬಾಲಕ ತನ್ನ ತಂದೆಯ ಜೊತೆ ಜೀವನ ಸಾಗಿಸುತ್ತಿದ್ದ. ಅವನು 10ನೇ ತರಗತಿಯಲ್ಲಿ ಓದುತ್ತಿದ್ದ. ಒಂದು ದಿನ ತನ್ನ ಆಸೆಯುನ್ನು ತಂದೆಯ ಬಳಿ ಹೇಳಿಕೊಂಡನು: "ಅಪ್ಪಾ, ನನಗೆ ಒಂದು ಬೈಕ್ ಬೇಕು" ಎಂದು. ಮಗನ ಆಸೆ ಕೇಳಿದ ತಂದೆ ಪ್ರೀತಿಯಿಂದ, "ನೀನು ಖಖಐಅ ಪರೀಕ್ಷೆಯಲ್ಲಿ 95% ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದು ಬಾ, ನಿನಗೆ ಬೈಕ್ ಕೊಡಿಸುತ್ತೇನೆ" ಎಂದು ಹೇಳಿದರು.

ತಂದೆಯ ಮಾತನ್ನು ಸವಾಲಾಗಿ ತೆಗೆದುಕೊಂಡ ಆ ಹುಡುಗ ರಾತ್ರಿ-ಹಗಲು ಶ್ರಮಪಟ್ಟು ಓದಿದ. ಕೊನೆಗೆ 98% ಅಂಕಗಳನ್ನು ಪಡೆದು ಶಾಲೆಯಲ್ಲಿ ಎಲ್ಲರ ಮೆಚ್ಚುಗೆ ಪಡೆದ. ಸಂತೋಷದಿಂದ ಅಂಕಪಟ್ಟಿಯನ್ನು ಹಿಡಿದು ಮನೆಗೆ ಬಂದಾಗ ಅವನ ಮನಸ್ಸಿನಲ್ಲಿ ಒಂದೇ ಕನಸು "ಅಪ್ಪ ಈಗ ಖುಷಿಪಟ್ಟು ನನ್ನನ್ನು ಬೈಕ್ ಖರೀದಿಸಲು ಕರೆದುಕೊಂಡು ಹೋಗುತ್ತಾರೆ" ಎಂಬುದು.

ಆತ ಉತ್ಸಾಹದಿಂದ "ಅಪ್ಪಾ ಅಪ್ಪಾಜೀ " ಎಂದು ಕರೆಯುತ್ತಿದ್ದ. ತಂದೆ ಮೌನವಾಗಿ ಕುರ್ಚಿಯ ಮೇಲೆ ಕೂತು ಒಂದು ದೊಡ್ಡ ಇಂಗ್ಲಿಷ್ ಪುಸ್ತಕವನ್ನು ಮಗನ ಕೈಗೆ ಕೊಟ್ಟರು. ಬೈಕ್ ನಿರೀಕ್ಷಿಸಿದ್ದ ಮಗನಿಗೆ ಅದು ತುಂಬಾ ನಿರಾಶೆ ತಂದಿತು. "ಇಷ್ಟು ಕಷ್ಟಪಟ್ಟು ಓದಿದ ಮೇಲೆ ಪುಸ್ತಕವೇ?" ಎಂಬ ಕೋಪದಿಂದ ಆ ಪುಸ್ತಕವನ್ನು ಮೂಲೆಗೆ ಎಸೆದು ಮನೆ ಬಿಟ್ಟು ಹೊರಟು ಹೋದ.

ತಂದೆ ಮಗನಿಗಾಗಿ ತುಂಬಾ ಹುಡುಕಿದರು. ಆದರೆ ಮಗ ಮರಳಿ ಬಂದಿಲ್ಲ. ವರ್ಷಗಳು ಕಳೆಯಿತು. ಐದು ವರ್ಷಗಳ ನಂತರ ತಂದೆ ನಿಧನರಾಗಿದ್ದಾರೆ ಎಂಬ ಸುದ್ದಿ ತಿಳಿದು ಅವನು ಮನೆಗೆ ಮರಳಿ ಬಂದ. ಮನೆ ತುಂಬಾ ಧೂಳು, ಜೇಡರ ಜಾಲಗಳು, ಮೌನದ ವಾತಾವರಣ.

ಆ ಸಮಯದಲ್ಲಿ ಅವನಿಗೆ ಆ ಪುಸ್ತಕ ನೆನಪಾಯಿತು. ಮೂಲೆಯಲ್ಲಿ ಬಿದ್ದಿದ್ದ ಪುಸ್ತಕವನ್ನು ತೆಗೆದು ತೆರೆದಾಗ ಅದರೊಳಗೆ ಯಮಹಾ ಬೈಕ್‌ನ ಕೀ ಇತ್ತು. ಅದನ್ನು ಕಂಡ ಕ್ಷಣ ಅವನ ಹೃದಯ ಒಡೆದುಹೋಯಿತು. ತಂದೆಯ ಪ್ರೀತಿಯನ್ನು ತಪ್ಪಾಗಿ ಅರ್ಥ ಮಾಡಿಕೊಂಡಿದ್ದಾನೆ ಎಂಬ ನೋವು ಅವನನ್ನು ಕಾಡಿತು. ಅವನು ಬಿಕ್ಕಿ ಬಿಕ್ಕಿ ಅತ್ತರೂ,



ಆ ಅಳುವಿಗೆ ಅರ್ಥ ಇರಲಿಲ್ಲ. ಯಾಕೆಂದರೆ ಸಮಯ ಈಗಾಗಲೇ ಕೈ ತಪ್ಪಿತ್ತು.

ಈ ಕಥೆ ನಮಗೆ ಒಂದು ಮಹತ್ವದ ಪಾಠ ಕಲಿಸುತ್ತದೆ.

ಜೀವನದಲ್ಲಿ ಎಲ್ಲವನ್ನೂ ಹೊರಗೆ ಕಾಣುವ ರೀತಿಯಿಂದಲೇ ಅರ್ಥ ಮಾಡಿಕೊಳ್ಳಬಾರದು. ಕೆಲವೊಮ್ಮೆ ತಂದೆ-ತಾಯಿ ಮೌನದಲ್ಲೇ ಅಪಾರ ಪ್ರೀತಿಯನ್ನು ಮರೆಮಾಡಿರುತ್ತಾರೆ. ಕೋಪದಲ್ಲಿ ತೆಗೆದುಕೊಳ್ಳುವ ನಿರ್ಧಾರಗಳು ಸಂಬಂಧಗಳನ್ನು, ಸಂತೋಷವನ್ನು ಮತ್ತು ಬದುಕಿನ ಅಮೂಲ್ಯ ಕ್ಷಣಗಳನ್ನು ಕಳೆದುಕೊಳ್ಳಬಹುದು.



**ಮಹಿಬೂಬ್ ಮದ್ಲಾಪುರ.**
**ಸಂಪನ್ಮೂಲ ವ್ಯಕ್ತಿಗಳು**

# ನೆಮ್ಮದಿಯ ಬದುಕಿಗೆ ಸಂಗೀತ ಸಹಕಾರಿ : ಕಿರಣ ಮಹಾರಾಜ



**ಬೀದರಃ ಮೇ.22:**ನಗರದ ರಾಂಪೂರೆ ಕಾಲೋನಿಯಲ್ಲಿರುವ ಶ್ರೀ ದತ್ತಾಶ್ರಮದ ಆವರಣದಲ್ಲಿ ಭಾನುವಾರ ಸಂಜೆ ನಡೆದ ಅಕ್ಕಮಹಾದೇವಿ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘ ಗುಮ್ಮೆ ಕಾಲೋನಿ, ಬೀದರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನಡೆದ ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನು ಹಿರಿಯ ಸಾಹಿತಿ ಎಂ.ಜಿ. ದೇಶಪಾಂಡೆ ಉದ್ಘಾಟಿಸಿ ಮಾತನಾಡಿದ ಅವರು, ಬೀದರ ಜಿಲ್ಲೆಯಲ್ಲಿ ಕಲೆ, ಸಾಹಿತ್ಯ, ಸಂಗೀತ ಉಳಿಸಿ ಬೆಳೆಸಲು ಇಂತಹ ಕಾರ್ಯಕ್ರಮಗಳ ಮೂಲಕ ಸಾಧ್ಯವಾಗಲಿದೆ ಎಂದರು. ಮನೆಗೆಲಸಗಳಿಗೆ ಸೀಮಿತವಾಗಿದ್ದ ಮಹಿಳೆಯರು ಇಂದಿನ ದಿನಮಾನಗಳಲ್ಲಿ ಸಾಂಸ್ಕೃತಿಕ, ಸಾಮಾಜಿಕ, ಧಾರ್ಮಿಕ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿಯೂ ಕೂಡ ಕೆಲಸ ನಿರ್ವಹಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ ಸರಸ್ವತಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಪ್ರತಿಭಾ ಚಾಮಾ ಮಾತನಾಡಿ, ಮಹಿಳೆಯರು ತಮ್ಮ ಕುಟುಂಬದ ಜೊತೆಗೆ ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ, ಒಳ್ಳೆಯ ನಾಗರಿಕರನ್ನಾಗಿ ಮಾಡುವುದು ಇಂದಿನ ದಿನಮಾನಗಳಲ್ಲಿ ತುಂಬ ಅವಶ್ಯಕವಾಗಿದೆ ಎಂದರು. ಇಂತಹ ಕಾರ್ಯಕ್ರಮಗಳಲ್ಲಿ ಮಕ್ಕಳನ್ನು ಕೂಡ ಕರೆದುಕೊಂಡು ಬಂದಲ್ಲಿ ಅವರಿಗೂ ಕೂಡ ಸಾಮಾಜಿಕ ಪರಿಜ್ಞಾನ ಮೂಡುತ್ತದೆ. ಮಕ್ಕಳು ಕೆಟ್ಟ ಚಟಗಳಿಗೆ ಬಲಿಯಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ಶ್ರೀ ದತ್ತಾಶ್ರಮ ಚಾರಿಟೇಬಲ್ ಟ್ರಷ್ಟ್‌ನ ಅಧ್ಯಕ್ಷರಾದ ಶ್ರೀ ಕಿರಣ ಮಹಾರಾಜರು ಸಾನಿಧ್ಯವಹಿಸಿ ಮಾತನಾಡಿ, ಸಂಗೀತ ಆಲಿಸುವುದರಿಂದ ಮಾನಸಿಕ ನೆಮ್ಮದಿ ಕಾಣಲು ಸಾಧ್ಯವಾಗಲಿದೆ. ಇಂದಿನ ಯಾಂತ್ರಿಕ ಬದುಕಿನ ಜಂಜಾಟದಲ್ಲಿ ಸುಮಧುರ ಗೀತೆಗಳು, ಶಾಸ್ತ್ರೀಯ ಸಂಗೀತ, ಜಾನಪದ ಹಾಗೂ ವಚನ ಗಾಯನ ಕೇಳುವುದರಿಂದ ಆರೋಗ್ಯ ಪೂರ್ಣ ಜೀವನ ನಡೆಸಲು ಸಾಧ್ಯವಾಗಲಿದೆ ಎಂದರು.

ಅತಿಥಿಗಳಾಗಿ ರೇಣುಕಾ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಅಶೋಕ ಬೂದಿಹಾಳ್ ಆಗಮಿಸಿದರು. ಅಕ್ಕಮಹಾದೇವಿ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷೆ ಶ್ರೀಮತಿ ಮಹಾದೇವಿ ಶಂಕರೆಪ್ಪಾ ಬಿರಾದಾರ ಅಧ್ಯಕ್ಷತೆ ವಹಿಸಿದರು. ಪ್ರೊ. ಉಮಾಕಾಂತ ಮೀಸೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲೆಯ ಖ್ಯಾತ ಸಂಗೀತ ಕಲಾವಿದರಾದ ಸಂಜೀವಕುಮಾರ ಸ್ವಾಮಿ ಉಜನಿ ಜಾನಪದ ಹಾಗೂ ವಚನ ಗಾಯನ ಪ್ರಸ್ತುತಪಡಿಸಿದರು. ಮಲ್ಲಿಕಾರ್ಜುನ ನಾಗಮಾರಪಳ್ಳಿ ಹಾಗೂ ರಾಜಕುಮಾರ ಬಂಪಳ್ಳಿ ತಬಲಾ ಸಾಥ ಮಾಡಿದರು.

ರಾಂಪೂರೆ ಕಾಲೋನಿಯ ಅಕ್ಕನ ಬಳಗ ಸಾಂಸ್ಕೃತಿಕ ಸಂಘ, ಜಗನ್ಮಾತೆ ಅಕ್ಕಮಹಾದೇವಿ ಮಹಿಳಾ ಸಾಂಸ್ಕೃತಿಕ ಸಂಘ, ಡೊಂಗರಗಿ ಗ್ರಾಮದ ಅಕ್ಕಮಹಾದೇವಿ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘ ಹಾಗೂ ಜೈ ಹನುಮಾನ ಭಜನೆ ಮತ್ತು ಸಾಂಸ್ಕೃತಿಕ ಸಂಘದವರು ಭಜನೆ ಕಾರ್ಯಕ್ರಮ ನಡೆಸಿದರು. ರಾಧಾಕೃಷ್ಣ ಮಹಿಳಾ ಕೋಲಾಟ ಸಂಘದ ಸದಸ್ಯರು ಆಕರ್ಷಕ ಕೋಲಾಟ ಪ್ರಸ್ತುತಪಡಿಸಿದರು. ಕುಮಾರಿ ಆಸ್ತಾ ಬಚ್ಚಣ್ಣಳ ಭರಟನಾಟ್ಯ ಮನಮೋಹಕವಾಗಿತ್ತು.

ಇದೇ ಸಂದರ್ಭದಲ್ಲಿ ಶ್ರೀ ವೈಷ್ಣೋದೇವಿ ಕಲ್ಚರಲ್ ಮತ್ತು ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಸಂಗಮೇಶ ಬಿರಾದರಗೆ 'ಕಾಯಕ ಸೇವಾ ರತ್ನ ಪ್ರಶಸ್ತಿ', ಬಸವೇಶ್ವರ ಮಹಾವಿದ್ಯಾಲಯದ ಉಪನ್ಯಾಸಕಿ ಡಾ. ವೀಣಾ ಜಲಾದೆ ಇವರಿಗೆ 'ಶಿಕ್ಷಣ ಸೇವಾ ರತ್ನ ಪ್ರಶಸ್ತಿ', ಶಿವಶಕ್ತಿ ಸತ್ಸಂಗ ಬಳಗದ ಅಧ್ಯಕ್ಷ ಸಿದ್ರಾಮಯ್ಯ ಸ್ವಾಮಿ ಹಿರೇಮಠ ಇವರಿಗೆ 'ಸಂಗೀತ ಸೇವಾ ರತ್ನ ಪ್ರಶಸ್ತಿ' ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಕವಿತಾ ಸ್ವಾಮಿ ಹಾಗೂ ಸಂಗೀತಾ ಪಾಟೀಲ್ ಸ್ವಾಗತ ಗೀತೆ ನಡೆಸಿಕೊಟ್ಟರು. ರೇಖಾ ವಗದಾಳೆ, ರೂಪಾ ಪಾಟೀಲ್ ಮತ್ತು ರಾಜೇಶ್ವರಿ ವಚನ ಗಾಯನ ಪ್ರಸ್ತುತ ಪಡಿಸಿದರು. ವೈಜಿನಾಥ ಪಾಟೀಲ್ ನಿರೂಪಿಸಿದರೆ, ಭಾರತಿ ಸಂಗಮೇಶ ಬಿರಾದಾರ ವಂದಿಸಿದರು.

ಈ ಸಂದರ್ಭದಲ್ಲಿ ಈರಮ್ಮ, ರೇಖಾ, ಸರೋಜನಿ, ನಿರ್ಮಲಾ ಸ್ವಾಮಿ, ಪ್ರೇಮಲತಾ, ವಿದ್ಯಾವತಿ, ಉಮಾದೇವಿ, ಕೋಕಿಲಾ ಮಹಾದೇವಪ್ಪ, ರೇವಣಪ್ಪ ಮೂಲಗೆ, ನೂರಂದಪ್ಪ ಬಾಳೂರೆ, ಗೀತಾ ಪಾಟೀಲ್, ಪುಷ್ಪಲತಾ ಮುಂತಾದವರು ಉಪಸ್ಥಿತರಿದ್ದರು.

# ಮನೆ ಕುಸಿತ ಸಂತ್ರಸ್ತ ಕುಟುಂಬಕ್ಕೆ ಶಾಸಕ ಬಿ. ನಾಗೇಂದ್ರ ನೆರವು



**ಬಳ್ಳಾರಿ, ಮೇ.22:** ನಗರದ ಬಂಡಿಹಟ್ಟಿ ಮುಖ್ಯರಸ್ತೆಯ ಬಂದರ್ ಶಾ ಬಾಬಾ ದರ್ಗಾ ಸಮೀಪ ಭಾರೀ ಮಳೆಯಿಂದ ಮನೆ ಕುಸಿದು ಸಂಕಷ್ಟಕ್ಕೆ ಸಿಲುಕಿದ್ದ ಕುಟುಂಬಕ್ಕೆ ಬಳ್ಳಾರಿ ಗ್ರಾಮೀಣ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವ ಬಿ. ನಾಗೇಂದ್ರ ಮಾನವೀಯ ನೆರವಿನ ಕೈಚಾಚಿದ್ದಾರೆ.

ಕಳೆದ ಕೆಲ ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ವಾರ್ಡ್ 30ರಲ್ಲಿರುವ ಮನೆ ಏಕಾಏಕಿ ಕುಸಿದು ಬಿದ್ದ ಪರಿಣಾಮ ಕುಟುಂಬದ ಸದಸ್ಯರು ಭಯಭೀತರಾಗಿದ್ದು, ಮನೆಯಲ್ಲಿದ್ದ ಗೃಹೋಪಯೋಗಿ ವಸ್ತುಗಳು ಹಾನಿಗೊಳಗಾಗಿವೆ. ಮನೆ ಕಳೆದುಕೊಂಡ ಕುಟುಂಬ ತಾತ್ಕಾಲಿಕ ಆಶ್ರಯದಲ್ಲಿ ದಿನ ಕಳೆಯುವಂತ ಪರಿಸ್ಥಿತಿ ನಿರ್ಮಾಣವಾಗಿತ್ತು.

ಸಂತ್ರಸ್ತ ಕುಟುಂಬದ ದುಸ್ಥಿತಿಯ ಮಾಹಿತಿ ತಿಳಿದ ತಕ್ಷಣ ಶಾಸಕ ನಾಗೇಂದ್ರ ಅವರು ಸ್ಪಂದಿಸಿ ಆರ್ಥಿಕ ನೆರವು ನೀಡುವ ಮೂಲಕ ಮಾನವೀಯತೆ ಮೆರೆದಿದ್ದಾರೆ. ತಮ್ಮ ಇತರ ಕಾರ್ಯಕ್ರಮಗಳಲ್ಲಿ ನಿರತರಾಗಿದ್ದ ಹಿನ್ನೆಲೆಯಲ್ಲಿ ಅವರ ಪರವಾಗಿ ಬೆಂಬಲಿಗರು ಸ್ಥಳಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಚೆಕ್ ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದಬೆಂಬಲಿಗರು, "ಮಳೆ ಹಾನಿಯಿಂದ ಸಂಕಷ್ಟದಲ್ಲಿರುವ ಜನರ ನೆರವಿಗೆ ಶಾಸಕ ನಾಗೇಂದ್ರ ಅವರು ಸದಾ ಸ್ಪಂದಿಸುತ್ತಾರೆ. ಸಂತ್ರಸ್ತ ಕುಟುಂಬಕ್ಕೆ ತುರ್ತು ನೆರವು ಒದಗಿಸುವ ಉದ್ದೇಶದಿಂದ ಆರ್ಥಿಕ ಸಹಾಯ ನೀಡಲಾಗಿದೆ" ಎಂದು ಹೇಳಿದರು.ಸ್ಥಳೀಯ ನಿವಾಸಿಗಳು ಕೂಡ ಶಾಸಕ ನಾಗೇಂದ್ರ ಅವರ ನೆರವಿನ ಕಾರ್ಯವನ್ನು ಮೆಚ್ಚುಗೆ ವ್ಯಕ್ತಪಡಿಸಿದರು. "ಮನೆ ಕುಸಿತದಿಂದ ಕುಟುಂಬ ತೀವ್ರ ಆತಂಕಕ್ಕೆ ಒಳಗಾಗಿತ್ತು. ಇಂತಹ ಸಂದರ್ಭದಲ್ಲಿ ಜನಪ್ರತಿನಿಧಿಗಳು ಸ್ಪಂದಿಸಿರುವುದು ಧೈರ್ಯ ತುಂಬುವ ಕೆಲಸವಾಗಿದೆ" ಎಂದು ಹೇಳಿದರು.

ಮಳೆ ಹಾನಿಯಿಂದ ನಗರದಲ್ಲಿ ಹಲವು ಪ್ರದೇಶಗಳಲ್ಲಿ ಮನೆಗಳಿಗೆ ಹಾನಿಯಾಗಿರುವುದರಿಂದ ಸರ್ಕಾರ ಮತ್ತು ಸ್ಥಳೀಯ ಆಡಳಿತ ಮತ್ತಷ್ಟು ಪರಿಹಾರ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹವೂ ಸಾರ್ವಜನಿಕ ವಲಯದಿಂದ ಕೇಳಿಬರುತ್ತಿದೆ.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಭಾರತದ ನವೋದಯ ಧೃವತಾರೆ ರಾಜಾ ರಾಮ್ ಮೋಹನರಾಯ್




**ಕಲಬುರಗಿ: ಮೇ.22:**ಹತ್ತೊಂಬತ್ತನೆ ಶತಮಾನದ ಭಾರತದ ಬೌದ್ಧಿಕ, ಸಾಮಾಜಿಕ, ಧಾರ್ಮಿಕ ಮತ್ತು ರಾಜಕೀಯ ಬೆಳವಣಿಗೆಯ ಸುಧಾರಣೆಯಲ್ಲಿ ಅದ್ವಿತಿಯವಾದ ಪಾತ್ರವನ್ನು ವಹಿಸಿದ ರಾಜಾ ರಾಮ್ ಮೋಹನರಾಯರು, 'ಭಾರತದ ನವೋದಯ ಧೃವತಾರೆ'ಯಾಗಿದ್ದಾರೆ. ಅವರು ಶ್ರೇಷ್ಠ ಸಮಾಜ ಸುಧಾರಕರು ಎಂದು ಉಪನ್ಯಾಸಕ, ಚಿಂತಕ ಎಚ್.ಬಿ.ಪಾಟೀಲ ಹೇಳಿದರು.
ನಗರದ ಆಳಂದ ರಸ್ತೆಯ ಜೆ.ಆರ್. ನಗರದಲ್ಲಿರುವ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ರಾಜಾ ರಾಮ್ ಮೋಹನರಾಯ್'ರ 253ನೇ ಜನ್ಮದಿನಾಚರಣೆಯಲ್ಲಿ ಭಾವಚಿತ್ರಕ್ಕೆ ಪುಷ್ಪನಗನಗಳನ್ನು ಸಲ್ಲಿಸಿ ಅವರು ಮಾತನಾಡುತ್ತಿದ್ದರು.
ಮೋಹನರಾರು ತಮ್ಮ 15ನೇ ವಯಸ್ಸಿನಲ್ಲಿಯೇ ಮೌಢ್ಯತೆ, ಗೊಡ್ಡು ಸಂಪ್ರದಾಯಗಳ ವಿರುದ್ಧ ಪ್ರತಿಭಟಿಸಿದರು. ಇದಕ್ಕಾಗಿ ಸಂಪ್ರದಾಯಶರಣ ಮನೆತನವಾದ ತಮ್ಮ ಮನೆಯನ್ನು ತೊರೆಯಬೇಕಾಯಿತು. 'ಬ್ರಹ್ಮ ಸಮಾಜ'ವನ್ನು ಸ್ಥಾಪಿಸಿ ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡಿದರು. ಏಕದೇವೋಪಾಸನೆ, ವಿಗ್ರಹ ಪೂಜೆ ವಿರೋಧ, ಸತಿ ಸಹಗಮನ ಪದ್ಧತಿಯ ನಿರ್ಮೂಲನೆ, ಬಹು ಪತ್ನಿತ್ವ ನಿಷೇಧ, ವಿಧವಾ ವಿವಾಹಕ್ಕೆ ಪ್ರೋತ್ಸಾಹದಂತಹ ಅನೇಕ ಕ್ರಾಂತಿಕಾರಕ ಕಾರ್ಯಗಳನ್ನು ಮಾಡುವ ಮೂಲಕ ನಮ್ಮ ದೇಶದ ಇತಿಹಾಸದಲ್ಲಿ 'ಪುನರಜ್ಜೀವನದ ಪಿತಾಮಹ' ಎಂದು ಕರೆಸಿಕೊಂಡಿದ್ದಾರೆ ಎಂದರು.
ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್ ಮಾತನಾಡಿ, ರಾಜಾ ರಾಮ್ ಮೋಹನರಾಯ ಅವರು ಸಾಮಾಜಿಕ ಕಾರ್ಯಗಳನ್ನು ಮಾಡುವ ಸಂದರ್ಭದಲ್ಲಿ ಸಾಕಷ್ಟು ವಿರೋಧ, ನೋವುಗಳನ್ನು ಅನುಭವಿಸಿ, ಇವೆಲ್ಲವುಗಳನ್ನು ಮೆಟ್ಟಿ ನಿಂತು ಕ್ರಾಂತಿ ಮಾಡಿದ್ದು ಸಾಮಾನ್ಯವಾದದ್ದಲ್ಲ ಎಂದು ನುಡಿದರು.
ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಶಿಕ್ಷಕಿಯರಾದ ಪೂಜಾ ಹೂಗಾರ, ಮುಸ್ಕಾನ್ ಶೇಖ್, ನೇಹಾ, ಕಾವೇರಿ ಹೌದೆ ಹಾಗೂ ವಿದ್ಯಾರ್ಥಿಗಳಿದ್ದರು.

# ಜೂ.18 ರಾಜ್ಯಸಭೆಯ 24 ಸ್ಥಾನಗಳಿಗೆ ಚುನಾವಣೆ



**ಬೆಂಗಳೂರು, ಮೇ 22–** ಕರ್ನಾಟಕದ 4 ಸ್ಥಾನಗಳು ಸೇರಿದಂತೆ ರಾಜ್ಯಸಭೆಯ ಒಟ್ಟು 24 ಸ್ಥಾನಗಳಿಗೆ ಜೂನ್ 18 ರಂದು ಚುನಾವಣೆ ನಡೆಯಲಿದೆ.
ಈ ಎಲ್ಲಾ 24 ಸ್ಥಾನಗಳು ಮುಂದಿನ ತಿಂಗಳು ತೆರವಾಗಲಿದ್ದು, ಈ ಸ್ಥಾನಗಳಿಗೆ ಕೇಂದ್ರ ಚುನಾವಣಾ ಆಯೋಗ ಚುನಾವಣಾ ವೇಳಾ ಪಟ್ಟಿಯನ್ನು ಪ್ರಕಟಿಸಿದ್ದು, ಜೂನ್ 18 ರಂದು ಮತದಾನ ನಿಗದಿಯಾಗಿದೆ.
ನಾಮಪತ್ರ ಸಲ್ಲಿಸಲು ಜೂನ್ 8 ಕಡೇ ದಿನವಾಗಿದ್ದು, ನಾಮಪತ್ರ ವಾಪಸ್ಸಾತಿಗೆ ಜೂನ್ 11 ಕೊನೆಯ ದಿನ. ಜೂನ್ 18 ರಂದು ಮತದಾನ, ಮತಎಣಿಕೆ ನಡೆದು ಅಂದೇ ಫಲಿತಾಂಶ ಪ್ರಕಟಗೊಳ್ಳಲಿದೆ.
ವಿವಿಧ ರಾಜ್ಯಗಳ ವಿಧಾನಸಭೆಗಳಿಂದ ರಾಜ್ಯಸಭೆಯ 24 ಸ್ಥಾನಗಳಿಗೆ ಸದಸ್ಯರ ಆಯ್ಕೆ ನಡೆಯಲಿದೆ.

ಕರ್ನಾಟಕದಲ್ಲೂ 4 ಸ್ಥಾನಕ್ಕೆ ಚುನಾವಣೆ
ಕರ್ನಾಟಕದಲ್ಲೂ 4 ರಾಜ್ಯಸಭಾ ಸ್ಥಾನಗಳು ಖಾಲಿಯಾಗಲಿದ್ದು, ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಬಿಜೆಪಿಯ ಈರಣ್ಣ ಕಡಾಡಿ ಮತ್ತು ಕೆ. ನಾರಾಯಣ ಇವರುಗಳ ಅವಧಿ ಬರುವ ಜೂನ್ 25ಕ್ಕೆ ಕೊನೆಗೊಳ್ಳಲಿದೆ.
ವಿಧಾನಸಭೆಯಲ್ಲಿ ಶಾಸಕರ ಸಂಖ್ಯಾಬಲದ ಪ್ರಕಾರ 4 ಸ್ಥಾನಗಳಲ್ಲಿ ಮೂರು ಸ್ಥಾನಗಳು ಕಾಂಗ್ರೆಸ್‌ಗೆ ಸಿಗಲಿದ್ದು, ಒಂದು ಸ್ಥಾನ ಬಿಜೆಪಿಗೆ ಸಿಗಲಿದೆ.
ಹಾಲಿ ರಾಜ್ಯಸಭಾ ಸದಸ್ಯರಾಗಿರುವ ಮಾಜಿ ಪ್ರಧಾನಿ ದೇವೇಗೌಡರು ಮತ್ತೊಂದು ಅವಧಿಗೆ ರಾಜ್ಯಸಭೆಗೆ ಪ್ರವೇಶಿಸಲು ಉತ್ಸುಕರಾಗಿದ್ದಾರೆ. ಆದರೆ ಜೆಡಿಎಸ್ ಪಕ್ಷಕ್ಕೆ ಹೆಚ್ಚಿನ ಶಾಸಕರ ಸಂಖ್ಯಾಬಲ ಇಲ್ಲದ ಕಾರಣ ಮೈತ್ರಿ ಪಕ್ಷವಾದ ಬಿಜೆಪಿ ಒಪ್ಪಿದರೆ ದೇವೇಗೌಡರನ್ನು ರಾಜ್ಯಸಭೆಗೆ ಆಯ್ಕೆ ಮಾಡಬಹುದು.

ರಾಜ್ಯಸಭಾ ಚುನಾವಣೆಯಲ್ಲಿ ಮಾಜಿ ಪ್ರಧಾನಿ ದೇವೇಗೌಡರಿಗೆ ಬೆಂಬಲಿಸುವ ಬಗ್ಗೆ ಬಿಜೆಪಿಯಲ್ಲಿ ಇನ್ನೂ ಯಾವ ತೀರ್ಮಾನಗಳು ಆಗಿಲ್ಲ.
ನಿನ್ನೆ ನಡೆದ ಬಿಜೆಪಿ ಕೋರ್ ಕಮಿಟಿ ಸಭೆಯಲ್ಲಿ ರಾಜ್ಯಸಭಾ ಸ್ಥಾನಕ್ಕೆ ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ ಇಲ್ಲವೇ ನಿರ್ಮಲ್ ಕುಮಾರ್ ಸುರಾನ ಅವರ ಹೆಸರನ್ನು ಶಿಫಾರಸ್ಸು ಮಾಡುವ ಬಗ್ಗೆ ಚರ್ಚೆಗಳು ನಡೆದಿದ್ದವು.
ಅಂತಿಮವಾಗಿ ಬಿಜೆಪಿ ಹೈಕಮಾಂಡ್ ಈ ಬಗ್ಗೆ ತೀರ್ಮಾನ ಕೈಗೊಳ್ಳಲಿದ್ದು, ಒಂದು ವೇಳೆ ಬಿಜೆಪಿ ವರಿಷ್ಠರು ದೇವೇಗೌಡರಿಗೆ ಅವಕಾಶ ಮಾಡಿಕೊಟ್ಟರೆ ದೇವೇಗೌಡರು ಮತ್ತೊಮ್ಮೆ ರಾಜ್ಯಸಭಾ ಸದಸ್ಯರಾಗಲಿದ್ದಾರೆ.ದೇವೇಗೌಡರಿಗೆ ರಾಜ್ಯಸಭಾ ಸ್ಥಾನಕ್ಕೆ ಮತ್ತೊಂದು ಅವಧಿಗೆ ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿಯವರು ದೆಹಲಿ ಮಟ್ಟದಲ್ಲಿ ಬಿಜೆಪಿ ನಾಯಕರ ಜತೆ ಚರ್ಚೆ ನಡೆಸಿದ್ದು, 3–4 ದಿನಗಳ ಹಿಂದೆ ಅವರು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ಭೇಟಿ ಮಾಡಿ ಚರ್ಚಿಸಿದ್ದರು.

# ಮೂರು ವರ್ಷಗಳ ನನ್ನ ಸಾರ್ಥಕ ಸೇವೆ ತೃಪ್ತಿ ತಂದಿದೆ: ಈಶ್ವರಸಿಂಗ್ ಠಾಕೂರ್

**ಬೀದರ್:ಮೇ.22:** 2023ರ ಸಾರ್ವತ್ರಿಕ ವಿಧಾನ ಸಭೆ ಚುನಾವಣೆಯಲ್ಲಿ ತಾನು ಭಾರತೀಯ ಜನತಾ ಪಕ್ಷದಿಂದ ಸ್ಪರ್ಧಿಸಿ ಸೋತಿದ್ದರೂ ಕ್ಷೇತ್ರದ ಜನರ ಸೇವೆ ಮಾಡುತ್ತ ಮೂರು ವರ್ಷಗಳು ಗತಿಸಿದ್ದು ಗೊತ್ತೆ ಆಗಲಿಲ್ಲ. ಈ ಮೂರು ವರ್ಷಗಳ ಸಾರ್ಥಕ ಸೇವೆ ನನಗೆ ತೃಪ್ತಿ ತಂದಿದೆ ಎಂದು ಬೀದರ್ ಉತ್ತರ ವಿಧಾನ ಸಭೆ ಕ್ಷೇತ್ರದ ಬಿಜೆಪಿ ಮುಖಂಡ ಈಶ್ವರಸಿಂಗ್ ಠಾಕೂರ್ ತಿಳಿಸಿದರು.



ಗುರುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಚುನಾವಣೆ ಸೋತರು ಕಳೆದ ಮೂರು ವರ್ಷಗಳಿಂದ ಜನರ ಸೇವೆ ಮಾಡುವುದಾಗಿ ಚುನಾವಣೆ ಸಂದರ್ಭದಲ್ಲಿ ಮತದಾರರಿಗೆ ಭರವಸೆ ನೀಡಿದ್ದೆ ಸೋಲು ಗೆಲವು ಏನೆ ಆಗಲಿ ನಿಮ್ಮೊಂದಿಗೆ ಇರುತ್ತೇನೆ ಎಂದಿದ್ದೆ ಅದರಂತೆ ಕಳೆದ ಮೂರು ವರ್ಷಗಳಿಂದ ಜನರ ಸೇವೆಯಲ್ಲಿ ತೊಡಗಿದ್ದು ನನ್ನ ರಿಪೋರ್ಟ ಕಾರ್ಡ ಜನರ ಮುಂದೆ ಇಡೋಣ ಎಂಬ ಉದ್ದೇಶ ಹೊಂದಿದ್ದೇನೆ ಎಂದರು.

ಚುನಾವಣೆಯಲ್ಲಿ ಸೋಲು ಅನುಭವಿಸಿದ ನಂತರ ಗಣೇಶನ ಕಾರ್ಯದಿಂದ ಶುರು ಮಾಡುವ ಉದ್ದೇಶದಿಂದ ಆಶಾಡ ಏಕಾದಶಿ ದಿನದಂದು ಶಹಾಗಂನಲ್ಲಿರುವ ಕ್ರಾಂತಿ ಗಣೇಶ ದೇವಸ್ಥಾನದ ಜೀರ್ಣೋದ್ದಾರಕ್ಕೆ ಮುಂದಾಗಿ ಅಲ್ಲಿ ಬೋರವೆಲ್ ಕೊರೆದು ನಂತರ ಮಂದಿರ ನಿರ್ಮಾಣಕ್ಕಾಗಿ ಭೂಮಿ ಪೂಜೆ ನೆರವೇರಿಸಲಾಯಿತು. ಹಳೆ ಸೀಟಿಯಲ್ಲಿನ ಅಯೊದ್ದೆ ಗಣೇಶ ದೇವಸ್ಥಾನದ ಜೀರ್ಣೋದ್ದಾರ, ಅಲ್ಲಿಯ ಭವಾನಿ ಮಂದಿರದ ಜೀರ್ಣೋದ್ದಾರ, ಜನವಾಡ ಹಾಗೂ ಚಿಲ್ಲರ್ಗಿಯಲ್ಲಿರುವ ಪಾಂಡುರಂಗ ಮಂದಿರಗಳ ಮೂರ್ತಿ ಸ್ಥಾಪನೆ, ಮಾಳೆಗಾಂವದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಮೂರ್ತಿ ಹಾಗೂ ಮರ್ಜಾಪುರದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ ಪ್ರತಿಷ್ಠಾಪಿಸಲಾಯಿತು. ತಾಲೂಕಿನ ಯರನಳ್ಳಿ ಹಾಗೂ ನಗರದ ಮಾಧವನಗರದಲ್ಲಿ ಅಕ್ಕಮಹಾದೇವಿ ಮೂರ್ತಿ ಸ್ಥಾಪನೆ ಹಾಗೂ ಅಲ್ಲಿ ದೇವಾಲಯ ನಿರ್ಮಾಣ. ಮೈಲೂರನಲ್ಲಿ ಹಳೆ ಪಾಂಡುರಂಗನ ದೇವಸ್ಥಾನವನ್ನು ಹೊಸದಾಗಿ ಕಟ್ಟಲಿಕ್ಕೆ ಸಹಕಾರ. ಒಟ್ಟಾರೆ ಬಹಮ್ಮನಿ ಸುಲ್ತಾನರ ಕಾಲದಿಂದಲೂ ಪಾಳು ಬಿದ್ದಿದ್ದ ಅದೆಷ್ಟೊ ದೇವಸ್ಥಾನಗಳಿಗೆ ಮರುಜೀವ ಕೊಡುವ ಪೂಣ್ಯ ಕಾರ್ಯ ತನ್ನಿಂದಾಗಿರುವುದಕ್ಕೆ ಹೆಮ್ಮೆ ಪಡುತ್ತೇನೆ ಎಂದರು.

ಕೇಂದ್ರ ಸರ್ಕಾರದ ಆಯುಷ್ಮಾನ ಭಾರತ ಆರೋಗ್ಯ ಕರ್ನಾಟಕ ಯೋಜನೆ ಅಡಿ ಅದೆಷ್ಟೊ ಕುಟುಂಬಗಳಿಗೆ ಶಸ್ತ್ರ ಚಿಕಿತ್ಸೆ ಕೊಡಿಸಿರುವ ಬಗ್ಗೆ ತೃಪ್ತಿ ಇದೆ. ಕಳೆದ ವರ್ಷ ಕುಂಭ ಮೇಳ ಸಂದರ್ಭದಲ್ಲಿ ಅಪಘಾತದಲ್ಲಿ ಪ್ರಾಣ ಕಳೆದುಕೊಂಡವರಿಗೆ ಸ್ವಗೃಹಕ್ಕೆ ಶವಗಳನ್ನು ತರುವುದು ಹಾಗೂ ಗಾಯಾಳುಗಳಿಗೆ ಚಿಕಿತ್ಸೆ ಕೊಡಿಸುವಲ್ಲಿ ಮುತುವರ್ಜಿ ವಹಿಸಿದಕ್ಕೆ ಅಭಿಮಾನ ಪಡುತ್ತೇನೆ. ದೇಶಕ್ಕಾಗಿ ಅದರಲ್ಲೂ ಈ ನೆಲದ ಸ್ವತಂತ್ರಕ್ಕಾಗಿ ಪ್ರಾಣ ತ್ಯಾಗ ಮಾಡಿದ ಭಾಯಿ ಶಾಮಲಾಲ ಹಾಗೂ ಬನ್ಸಿಲಾಲ ಅವರ ಬಲಿದಾನ ದಿವಸ ಆಚರಣೆ. ಹೊಲದಲ್ಲಿ ಹಾವು ಕಡಿದು ಪ್ರಾಣ ತೆತ್ತ ರೈತ ಕುಟುಂಬಕ್ಕೆ ಸಾಂತ್ವನ ಜೊತೆಗೆ ವಯಕ್ತಿಕ ಸಹಾಯ, ಶಾಟ್ ಸರ್ಕ್ಯೂನಿಂದ ಅದೆಷ್ಟೊ ಕುಟುಂಬಕ್ಕಾದ ಹಾನಿ ಅವಲೋಕಿಸಿ ವಯಕ್ತಿಕ ಸಹಕಾರ, ಭೀಕರ ಕಾಯಿಲೆಗಳಿಂದ ಬಳಲುತ್ತಿರುವ ಕ್ಷೇತ್ರದ ಅನೇಕ ರೋಗಿಗಳಿಗೆ ನೆರವು ಸೇರಿದಂತೆ ಹತ್ತು ಹಲವಾರು ರಚನಾತ್ಮಕ ಕಾರ್ಯಗಳನ್ನು ಮಾಡಿರುವುದು ನನಗೆ ಸಮಾಧಾನವಿದೆ ಎಂದರು.ನಿತ್ಯ ನನ್ನ ಸಂಪರ್ಕ ಕಚೇರಿಯಲ್ಲಿ ಸಾರ್ವಜನಿಕರ ಸಮಸ್ಯೆಯನ್ನು ಆಲಿಸುತ್ತೇನೆ ಅವರ ಸಮಸ್ಯೆಗಳನ್ನು ಬಗೆಹರಿಸುವ ಪ್ರಯತ್ನ ಕೂಡ ಮಾಡುತ್ತಿರುವುದಾಗಿ ಠಾಕೂರ್ ಹೇಳಿದರು.ಬೀದರ್ ಉತ್ತರ ಕ್ಷೇತ್ರದ ಬಿಜೆಪಿ ಮಂಡಲ ಅಧ್ಯಕ್ಷ ದೀಪಕ ಗಾದಗಿ ಮಾತನಾಡಿ, ಬೀದರ್ ಉತ್ತರ ವಿಧಾನ ಸಭಾ ಕ್ಷೇತ್ರದಲ್ಲಿ ಅರ್ಹವಿರುವ ಅದೆಷ್ಟೊ ಬಿಪಿಎಲ್ ಕಾರ್ಡ್ಗಳನ್ನು ರದ್ದು ಮಾಡಿರುವ ಕಾಂಗ್ರೆಸ್ ಸರ್ಕಾರದ ಕ್ರಮ ಅತ್ಯಂತ ನಾಚಿಕೆಗೀಡು ಸಂಗತಿ. ವಿದ್ಯುತ ಸಮಸ್ಯೆ ಎದುರಿಸುತ್ತಿರುವ ರೈತರ ಗೋಳು ಕೇಳುರ್ಯಾರು? ಎಂದು ಪ್ರಶ್ನೆ ಮಾಡಿರುವ ಅವರು, ರೈತರ ಪಂಪಸೆಗಳಿಗೆ ಸಮರ್ಪಕ ವಿದ್ಯುತ ಪುರೈಕೆ, ಗಂಗಾ ಕಲ್ಯಾಣ ಯೋಜನೆ ಅಡಿ ರೈತರಿಗೆ ಆದ ಅನ್ಯಾಯದ ವಿರುದ್ಧ ಬಿಜೆಪಿ ಜೆಸ್ಕಾಮ್ ಕಚೇರಿಗೆ ಆದಷ್ಟು ಶೀಘ್ರ ಮುತ್ತಿಗೆ ಹಾಕಲಿದೆ ಎಂದು ಎಚ್ಚರಿಸಿದರು.ಬಿಜೆಪಿ ಜಿಲ್ಲಾ ಕಾರ್ಯದರ್ಶಿ ರಾಜೇಂದ್ರ ಪೂಜಾರಿ, ಕ್ಷೇತ್ರದ ಉಸ್ತುವಾರಿ ಗೋವಿಂದರಾವ ಬಿರಾದಾರ, ಮಂಡಲದ ಪ್ರಮುಖರಾದ ಸುನಿಲ ಗೌಳಿ, ನಿಜಲಿಂಗಪ್ಪ ಪಾಟೀಲ, ನಾಗೇಂದ್ರ ಪಾಟೀಲ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು

## ರೈಲ್ವೆ ಕೆಳ ಸೇತುವೆ ನಿರ್ಮಾಣಕ್ಕಾಗಿ ಸ್ಥಳ ಪರಿಶೀಲನೆಎಂಟು ತಿಂಗಳಲ್ಲಿ ಕಾಮಗಾರಿ ಪ್ರಾರಂಭ: ಸಂಸದ ಸಾಗರ ಖಂಡ್ರೆ



**ಬೀದರ, ಮೇ.22:** ನಗರದ ಹಳೆ ಆದರ್ಶ ಕಾಲೋನಿ ನ್ಯಾಶನಲ್ ಕಾಲೇಜು ಹತ್ತಿರ ರೈಲ್ವೆ ಕೆಳ ಸೇತುವೆ ನಿರ್ಮಾಣ ಕಾರ್ಯಕ್ಕಾಗಿ ಗುರುವಾರ ಸಂಸದ ಸಾಗರ ಈಶ್ವರ ಖಂಡ್ರೆ ಅವರು ಜಿಲ್ಲಾಧಿಕಾರಿ, ರೈಲ್ವೆ ಇಲಾಖೆ ಅಧಿಕಾರಿ, ಏರ್‌ಫೋರ್ಸ್ ಅಧಿಕಾರಿ ಹಾಗೂ ಪುರಾತತ್ವ ಇಲಾಖೆ ಅಧಿಕಾರಿಗಳೊಂದಿಗೆ ಜಂಟಿಯಾಗಿ ಸ್ಥಳ ಪರಿಶೀಲನೆ ಮಾಡಿದರು .
ಈ ಸಮಯದಲ್ಲಿ ಸಂಸದರು ಅಧಿಕಾರಿಗಳೊಂದಿಗೆ ರೈಲ್ವೆ ಕೆಳ ಸೇತುವೆ ನಿರ್ಮಾಣದ ಸಾಧಕ–ಬಾದಕಗಳ ಬಗ್ಗೆ ಸಮಾಲೋಚನೆ ನಡೆಸಿದರು. ನಂತರ ಮಾತನಾಡಿದ ಅವರು, ಹಳೆ ಆದರ್ಶ ಕಾಲೋನಿ ಬಳಿ ರೈಲ್ವೆ ಕೆಳ ಸೇತುವೆ ನಿರ್ಮಾಣ ಮಾಡಬೇಕು ಎಂಬುದು ಜನರ ಬಹುದಿನಗಳ ಬೇಡಿಕೆಯಾಗಿತ್ತು. ಆದರೆ ಕೆಲವು ಸಮಸ್ಯೆಗಳ ಕಾರಣದಿಂದಾಗಿ ತೊಡಕಾಗಿತ್ತು, ನಿರಂತರ ಮೇಲ್ವಿಚಾರಣೆ ನಡೆಸಿ ಸಮಸ್ಯೆಗನ್ನು ಪರೇಹರಿಸಿ ಇಂದು ವಾಯುಪಡೆ, ರೈಲ್ವೆ ಹಾಗೂ ಪುರಾತತ್ವ ಇಲಾಖೆಯ ಅಧಿಕಾರಿಗಳೊಂದಿಗೆ ಜಂಟಿ ಸಮೀಕ್ಷೆ ನಡೆಸಿದ್ದೇನೆ.

ಸೇತುವೆ ನಿರ್ಮಾಣಕ್ಕೆ ವಾಯುಪಡೆಯ 0.33, ಖಾಸಗಿಯ 0.33 ಎಕರೆ ಜಾಗ ಬೇಕಾಗುವ ನಿರೀಕ್ಷೆ ಇದೇ. ವಾಯು ಪಡೆಯ ಅಧಿಕಾರಿಗಳು ಈಗಾಗಲೇ ತಾವು ನಮಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ರಕ್ಷಣಾ ಸಚಿವಾಲಯದಿಂದ ಅನುಮೋದನೆ ಕೊಡಿಸುವುದಾಗಿ ಭರವಸೆ ನೀಡಿದ್ದಾರೆ. ಸ್ಮಾರಕಗಳು ಇರುವುದರಿಂದ ಪುರಾತತ್ವ ಇಲಾಖೆಯವರು ಸಹ ಸಹಕಾರ ನೀಡಿ ಅನುಮತಿ ಕೊಡಿಸುವುದಾಗಿ ತಿಳಿಸಿದ್ದಾರೆ. ಈಗಾಗಲೇ ಪ್ರಾಥಮಿಕ ವರದಿ ಸಿದ್ದವಾಗಿದೆ. ಅಧಿಕಾರಿಗಳು ರೂಟ್ ಅಲೈ???ಮೆಂಟ್ ಫಿಕ್ಸ್ ಮಾಡುತ್ತಿದ್ದಾರೆ. ಒಂದು ತಿಂಗಳಲ್ಲಿ ವಿಸ್ತೃತ ವರದಿ ತಯ್ಯಾರಿಸಿ ಸಂಬಂದಿಸಿದ ಇಲಾಖೆಗಳಿಂದ ಎನ್.ಓ.ಸಿ ಪಡೆದು 8 ರಿಂದ 9 ತಿಂಗಳಲ್ಲಿ ಟೆಂಡರ್ ಕರೆದು ಕಾಮಗಾರಿ ಪ್ರಾರಂಭಿಸಲಾಗುವುದು. ಈ ರೈಲ್ವೆ ಕೆಳ ಸೇತುವೆ ನಿರ್ಮಾಣದಿಂದ ಟ್ರಾಫಿಕ್ ಸಮಸ್ಯೆ ನಿವಾರಣೆಯಾಗಿ ಜನರಿಗೆ ಅನುಕೂಲವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಮಹಾನಗರ ಪಾಲಿಕೆ ಆಯುಕ್ತ ಮುಕುಲ್ ಜೈನ್, ರೈಲ್ವೆ ಇಲಾಖೆ, ವಾಯುಪಡೆ ಹಾಗೂ ಪುರಾತತ್ವ ಇಲಾಖೆಯ ಅಧಿಕಾರಿಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮೇಲ್ಮಟ್ಟದ ಜಲಾಗಾರ ಬೇಡ

**ಲಕ್ಷೇಶ್ವರ,ಮೇ.22:** ಶತಮಾನಗಳ ಇತಿಹಾಸವಿರುವ ಪುರಸಭೆ ಉಮಾಮ ವಿದ್ಯಾಲಯ ಮತ್ತು ಪುರಸಭೆ ಕಲಾಮಹ ವಿದ್ಯಾಲಯ ಮೈದಾನ ಸಂರಕ್ಷಣೆ ಮತ್ತು ಕಾಲೇಜಿನ ಆವರಣದಲ್ಲಿ ನಿರ್ಮಿಸುತ್ತಿರುವ ಮೇಲ್ಮಟ್ಟದ ಜಲಾಗಾರ ನಿರ್ಮಾಣ ವಿರೋಧಿಸಿ ಉಗ್ರ ಹೋರಾಟಕ್ಕೆ ವೇದಿಕೆ ಸಜ್ಜಾಗಿದೆ.
ಎರಡು ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಹಳೆಯ ವಿದ್ಯಾರ್ಥಿಗಳು ಪಟ್ಟಣದ ನಾಗರಿಕರ ಸಹಕಾರದೊಂದಿಗೆ ಒಂದು ಹೋರಾಟ ಸಮಿತಿ ಮಾಡಿ ಎರಡು ಸಂಸ್ಥೆಗಳನ್ನು ಬೆಳೆಸುವುದು ಮೈದಾನದ ರಕ್ಷಣೆ ಕಾಲೇಜ್ ಎದುರಿಗೆನ ಮೇಲ್ಮಟ್ಟದ ಜಲಗಾರ ನಿರ್ಮಾಣ ಇವುಗಳನ್ನು ತಡೆಗಟ್ಟಲು ರೂಪರೇಷೆ ಕೈಗೊಳ್ಳಲು ಸೇರಿದ್ದ ಸಮಾನ ಮನಸ್ಕರ ನಿರ್ಣಯ ಕೈಗೊಂಡಿತ್ತು.

ಪತ್ರಕರ್ತರ ಕಾರ್ಯಾಲಯದಲ್ಲಿ ಕರೆಯಲಾಗಿದ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಪುರಸಭೆ ಮಾಜಿ ಅಧ್ಯಕ್ಷ ಎಂಆರ್ ಪಾಟೀಲ್ ಮಹೇಶ ಹೊಗೆಸೊಪ್ಪಿ ನ ತಿಪ್ಪಣ್ಣ ಸಂಶಿ ಬಿಎಸ್ ಬಾಳೆಶ್ವರ್ ಮಠ ಸೋಮಣ್ಣ ಉಪನಾಳ ಅವರುಗಳು ಯಾವುದೇ ಸಂದರ್ಭದಲ್ಲಿ ಎಂಎ ಕಾಲೇಜಿನ ಆವರಣದಲ್ಲಿ ನಿರ್ಮಿಸುತ್ತಿರುವ ಮೇಲ್ಮಟ್ಟದ ಜಲಗಾರವನ್ನು ಸ್ಥಗಿತಗೊಳಿಸದಿದ್ದರೆ ಯಾವುದೇ ಹೋರಾಟಕ್ಕೂ ಸಿದ್ಧ ಎಂದು ಘೋಷಿಸಿದರು.

ಸಾವಿರಾರು ವಿದ್ಯಾರ್ಥಿಗಳನ್ನು ನೀಡಿದ ಹೆಮ್ಮೆಯ ಕಾಲೇಜಿನ ಮುಂದೆ ಯಾರದೋ ಒತ್ತಾಯಕ್ಕೆ ಮಣಿದು ಅಧಿಕಾರಿಗಳು ಅನುಮತಿ ನೀಡಿರುವುದು ಅತ್ಯಂತ ಖಂಡನೀಯ ಈ ನಿರ್ಧಾರವನ್ನು ಹಿಂಪಡೆಯದಿದ್ದರೆ ಮೇ 30ರೊಳಗೆ ಅಂತಿಮ ನಿರ್ಧಾರ ಪ್ರಕಟಿಸದಿದ್ದರೆಹೊರ ಬಿಡದಿದ್ದರೆ ಮುಂದಾಗುವ ಯಾವುದೇ ಅನಾಹುತಕ್ಕೂ ಅಧಿಕಾರಿಗಳೇ ಹೊಣೆಯಾಗುತ್ತಾರೆ ಎಂದು ಎಚ್ಚರಿಸಿದರು.
ಈ ಸಂದರ್ಭದಲ್ಲಿ ಶರಣು ಗೋಡಿ ಡಿಬಿ ಪಕೀರಪ್ಪ ರಾಮಣ್ಣ ಲಮಾಣಿ ಗಡಪ್ಪನವರ ನೀಲಪ್ಪಪಡಿಗೇರಿ ಪ್ರಕಾಶ ಕೊಂಚಿಗೇರಿ ಮಠ ಖಾನ್ ಸಾಬ್ ಸುರಣಿಗಿ ಇದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ ಸಂಪರ್ಕಿಸಿ
6360866626

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE